ಸಂಪುಟ : 11 ಸಂಚಿಕೆ: 106 ಪುಟ : 4+2 ಬೆಲೆ: 3.00 ಗುರುವಾರ ಮೇ 28 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 106 Pages : 4+2 Price : 3.00 Thursday May 28 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಪನ್ಯಾಸಕರು, ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕಣಗಿನಹಾಳ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ಅತಿಥಿ ಶಿಕ್ಷಕರು ಹಾಗೂ ಅತಿಥಿ ಉಪನ್ಯಾಸಕರ ಹುದ್ದೆಗಳ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ, ಗಣಿತ, ಕನ್ನಡ ಹಾಗೂ ಇಂಗ್ಲಿಷ್ ವಿಷಯಗಳಿಗೆ ಒಟ್ಟು 6 ಅತಿಥಿ ಉಪನ್ಯಾಸಕರು/ಶಿಕ್ಷಕರ ಹುದ್ದೆಗಳು ಹಾಗೂ ಕನ್ನಡ ಮತ್ತು ಇಂಗ್ಲಿಷ್ ವಿಷಯಗಳಿಗೆ ತಲಾ ಒಂದರಂತೆ 2 ಹೆಚ್ಚುವರಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಮೆರಿಟ್ ಕಂ ಡೆಮೋ ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆ ನಡೆಯಲಿದ್ದು, ಅರ್ಜಿ ಸಲ್ಲಿಸಲು ಜೂನ್ 2 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಖುದ್ದಾಗಿ ಶಾಲೆಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಡೆಮೋ ದಿನಾಂಕವನ್ನು ನಂತರದಲ್ಲಿ ತಿಳಿಸಲಾಗುವುದು ಎಂದು ವಸತಿ ಶಾಲೆಯ ಪ್ರಾಂಶುಪಾಲರು ತಿಳಿಸಿದ್ದಾರೆ.

## ಬಾಡಿಗೆ ಕಟ್ಟಡಕ್ಕಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಶಿರಹಟ್ಟಿ ಪಟ್ಟಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ಮಂಜೂರಾಗಿರುವ ಹಿನ್ನೆಲೆಯಲ್ಲಿ ಸೂಕ್ತ ಕಟ್ಟಡವನ್ನು ಬಾಡಿಗೆ ಆಧಾರದಲ್ಲಿ ಪಡೆಯಲು ಇಲಾಖೆ ಮುಂದಾಗಿದೆ.

50 ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಹೊಂದಿರುವ ಪ್ರತ್ಯೇಕ ಕೊಠಡಿಗಳು, ಶೌಚಾಲಯ, ಸ್ನಾನಗೃಹ, ವಿಶಾಲ ಅಡುಗೆಮನೆ, ವಿದ್ಯುತ್ ಸೌಲಭ್ಯ ಹಾಗೂ ಕೊಳವೆಬಾವಿ (ಬೋರ್‌ವೆಲ್) ಸೇರಿದಂತೆ ಅಗತ್ಯ ಮೂಲಸೌಕರ್ಯಗಳಿರುವ ಸುಸಜ್ಜಿತ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಛಿಸುವ ಕಟ್ಟಡ ಮಾಲೀಕರು ಶಿರಹಟ್ಟಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08487–295097 ಹಾಗೂ 9480843132 ಅನ್ನು ಸಂಪರ್ಕಿಸಬಹುದು ಎಂದು ಶಿರಹಟ್ಟಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಐಪಿ ಹೆಸರು ಕೈ ತಪ್ಪದಂತೆ ಬಿ.ಎಲ್.ಓಗಳಿಗೆ ಖಡಕ್ ಸೂಚನೆ– ಮನೆ ಮನೆಗೆ ತೆರಳಿ ಮಾಹಿತಿ ಪರಿಶೀಲನೆಗೆ ಅಪರ ಜಿಲ್ಲಾಧಿಕಾರಿ ತಾಕೀತು

# ಮತದಾರರ ಪಟ್ಟಿಯಲ್ಲಿ ಲೋಪ ಬೇಡ!

■ ವಿಜಯಸಾಕ್ಷಿ ಸುದ್ದಿ, ಗದಗ

ಪಾರದರ್ಶಕ ಹಾಗೂ ದೋಷರಹಿತ ಮತದಾರರ ಪಟ್ಟಿ ತಯಾರಿಕೆಯಲ್ಲಿ ಬೂತ್ ಲೆವೆಲ್ ಅಧಿಕಾರಿಗಳ (ಬಿ.ಎಲ್.ಓ) ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ನಡೆದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಮ್ಯಾಪಿಂಗ್ ಸಭೆಯಲ್ಲಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗವು 14–05–2026ರಂದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ವೇಳಾಪಟ್ಟಿಯನ್ನು ಪ್ರಕಟಿಸಿದ್ದು, ಇಅಖ ಓಜಣ ತಂತ್ರಾಂಶದಲ್ಲಿ ಮತದಾರರ ಪಟ್ಟಿ ದತ್ತಾಂಶ ಜೂನ್ 16ರಂದು ಫ್ರೀಜ್ ಆಗಲಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ 2002ರ ಮತದಾರರ ಪಟ್ಟಿಗೆ 2025ರ ಮತದಾರರ ಪಟ್ಟಿಯನ್ನು ಮ್ಯಾಪಿಂಗ್ ಮಾಡುವ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಬೇಕಿದೆ ಎಂದು ತಿಳಿಸಿದರು.

ಬಿ.ಎಲ್.ಓಗಳು ವಿಶೇಷ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ ಮನೆ ಮನೆಗೆ ಭೇಟಿ ನೀಡಿ ಸಮಗ್ರ



ಮಾಹಿತಿ ಪರಿಶೀಲನೆ ನಡೆಸಬೇಕು. ಸ್ಥಳಾಂತರಗೊಂಡ ಹಾಗೂ ಮರಣ ಹೊಂದಿದ ಮತದಾರರ ಹೆಸರುಗಳ ಬಗ್ಗೆ ವಿಶೇಷ ಗಮನ ಹರಿಸಬೇಕು. ಸಾಹಿತಿಗಳು, ಕ್ರೀಡಾಪಟುಗಳು, ಪ್ರಶಸ್ತಿ ವಿಜೇತರು, ಸಂಸದರು, ಶಾಸಕರು, ಮಾಜಿ ತಾ.ಪಂ. ಅಧ್ಯಕ್ಷರು ಹಾಗೂ ಗ್ರಾಮ ಪಂಚಾಯಿತಿ ಸದಸ್ಯರು ಸೇರಿದಂತೆ ವಿಐಪಿ ಹಾಗೂ ವಿವಿಐಪಿ ಮತದಾರರ ಹೆಸರು ಮತದಾರರ ಪಟ್ಟಿಯಿಂದ ಕೈ ತಪ್ಪದಂತೆ ಎಚ್ಚರಿಕೆಯಿಂದ ಕೆಲಸ ನಿರ್ವಹಿಸಬೇಕು ಎಂದು ಸೂಚಿಸಿದರು.

ಈ ಕಾರ್ಯದಲ್ಲಿ ಯಾವುದೇ ಲೋಪದೋಷಗಳು ಉಂಟಾಗದಂತೆ ಬಿ.ಎಲ್.ಓಗಳು ಬಿ.ಎಲ್.ಎಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸಬೇಕು. ಆಯಾ ವಿಧಾನಸಭಾ ಕ್ಷೇತ್ರಗಳಲ್ಲಿ ಬಾಕಿ ಉಳಿದಿರುವ ಮ್ಯಾಪಿಂಗ್ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಿ ಜಿಲ್ಲೆಯ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯನ್ನು ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಹೇಳಿದರು.

ಸಭೆಯಲ್ಲಿ ಚುನಾವಣಾ ತಹಸೀಲ್ದಾರ್ ಸಂತೋಷ ಹಿರೇಮಠ ಹಾಗೂ ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರ ಬಿ.ಜಿ. ಗಿರಿತಮ್ಮಣ್ಣವರ ಬಿ.ಎಲ್.ಓಗಳ ಕರ್ತವ್ಯಗಳ ಕುರಿತು ಮಾಹಿತಿ ನೀಡಿದರು. ಆರೋಗ್ಯಯುತ ಮತದಾರರ ಪಟ್ಟಿ ತಯಾರಿಕೆಯಲ್ಲಿ ಬಿ.ಎಲ್.ಓಗಳ ಪಾತ್ರ ಪ್ರಮುಖವಾಗಿದ್ದು, ಮತದಾರರೊಂದಿಗೆ ವಿನಮ್ರವಾಗಿ ವರ್ತಿಸಿ ಮಾಹಿತಿ ಸಂಗ್ರಹಿಸಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಉಪನಿರ್ದೇಶಕ ಎಸ್.ಡಿ. ಪಾಟೀಲ, ಸಹಾಯಕ ಮತದಾರ ನೋಂದಣಾಧಿಕಾರಿಗಳು, ತಹಸೀಲ್ದಾರರು, ಬಿ.ಎಲ್.ಓಗಳು ಹಾಗೂ ಬಿ.ಎಲ್.ಓ ಮೇಲ್ವಿಚಾರಕರು ಉಪಸ್ಥಿತರಿದ್ದರು.

> "ವಿಐಪಿ ಹಾಗೂ ಸಾಮಾನ್ಯ ಮತದಾರರ ಹೆಸರುಗಳೂ ಕೈ ತಪ್ಪದಂತೆ ಪಾರದರ್ಶಕ ಮತದಾರರ ಪಟ್ಟಿ ತಯಾರಿಸುವುದು ಬಿ.ಎಲ್.ಓಗಳ ಪ್ರಮುಖ ಕರ್ತವ್ಯ."
> **– ಡಾ. ದುರಗೇಶ್ ಕೆ.ಆರ್.,**
> ಅಪರ ಜಿಲ್ಲಾಧಿಕಾರಿ

### ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸಭೆ

# ಮತದಾರರ ಪಟ್ಟಿ ಪರಿಷ್ಕರಣೆಗೆ ಚುರುಕು

■ ವಿಜಯಸಾಕ್ಷಿ ಸುದ್ದಿ, ಗದಗ

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಹಿನ್ನೆಲೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಮಹತ್ವದ ಸಭೆ ನಡೆಯಿತು.

ಭಾರತ ಚುನಾವಣಾ ಆಯೋಗವು 14–05–2026ರಂದು ಹೊರಡಿಸಿದ ಮಾರ್ಗಸೂಚಿಗಳ ಅನ್ವಯ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗುತ್ತಿದ್ದು, ಅದರ ಪೂರ್ವ ತಯಾರಿ ಹಾಗೂ ಸಮಗ್ರ ಮಾಹಿತಿಯನ್ನು ರಾಜಕೀಯ ಪಕ್ಷಗಳಿಗೆ ನೀಡುವ ಉದ್ದೇಶದಿಂದ ಸಭೆ ಆಯೋಜಿಸಲಾಗಿತ್ತು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಚುನಾವಣಾಧಿಕಾರಿಗಳು, ಅಪರ ಜಿಲ್ಲಾ ಚುನಾವಣಾಧಿಕಾರಿಗಳು, ಚುನಾವಣಾ ತಹಶೀಲ್ದಾರರು, ಮತದಾರ ನೋಂದಣಾಧಿಕಾರಿಗಳು ಹಾಗೂ ಸಹಾಯಕ



ಮತದಾರ ನೋಂದಣಾಧಿಕಾರಿಗಳ ವಿವರಗಳನ್ನು ಸಭೆಯಲ್ಲಿ ಹಂಚಿಕೊಳ್ಳಲಾಯಿತು.

ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 967 ಮತಗಟ್ಟೆಗಳಿದ್ದು, 4,48,794 ಪುರುಷ ಮತದಾರರು, 4,56,352 ಮಹಿಳಾ ಮತದಾರರು ಹಾಗೂ 60 ತೃತೀಯಲಿಂಗಿ ಮತದಾರರು ಸೇರಿ ಒಟ್ಟು 9,05,206 ಮತದಾರರಿದ್ದಾರೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

ಪ್ರತಿ ಮತಗಟ್ಟೆಗೆ ಒಬ್ಬರಂತೆ 967 ಬಿ.ಎಲ್.ಓಗಳು ಹಾಗೂ ಪ್ರತಿ 10 ಬಿ.ಎಲ್.ಓಗಳಿಗೆ ಒಬ್ಬರಂತೆ 97 ಬಿ.ಎಲ್.ಓ ಮೇಲ್ವಿಚಾರಕರು ಕಾರ್ಯನಿರ್ವಹಿಸುತ್ತಿದ್ದಾರೆ. 2002ರ ಮತದಾರರ ಪಟ್ಟಿಗೆ 2025ರ ಮತದಾರರನ್ನು ಮ್ಯಾಪಿಂಗ್ ಮಾಡುವ ಕಾರ್ಯದಲ್ಲಿ ಈಗಾಗಲೇ 8,26,953 ಮತದಾರರನ್ನು ಮ್ಯಾಪಿಂಗ್ ಮಾಡಲಾಗಿದ್ದು, ಶೇ.91.36ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲ 967 ಮತಗಟ್ಟೆಗಳಿಗೆ ಬೂತ್ ಲೆವೆಲ್ ಏಜೆಂಟ್‌ಗಳ (ಃಐಂ) ನೇಮಕ ಮಾಡಿ ಪಟ್ಟಿ ಸಲ್ಲಿಸುವಂತೆ ರಾಜಕೀಯ ಪಕ್ಷಗಳಿಗೆ ಸೂಚಿಸಲಾಯಿತು. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಬಿ.ಎಲ್.ಓಗಳು, ಸಹಾಯಕ ಮತದಾರ ನೋಂದಣಾಧಿಕಾರಿಗಳು ಹಾಗೂ ಮತದಾರ ನೋಂದಣಾಧಿಕಾರಿಗಳೊಂದಿಗೆ ರಾಜಕೀಯ ಪಕ್ಷಗಳು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಚುನಾವಣಾ ತಹಶೀಲ್ದಾರರು, ಸಹಾಯಕ ಮತದಾರ ನೋಂದಣಾಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಆಸಕ್ತಿ, ಪ್ರತಿಭೆಗೆ ಅವಕಾಶ ನೀಡಿದಾಗಲೇ ಮಕ್ಕಳ ಭವಿಷ್ಯ ಉಜ್ವಲ: ಮಂಜುನಾಥ ಅಕ್ಕಸಾಲಿ

## ಪಾಲಕರ ಆಚಾರ–ವಿಚಾರವೇ ಮಕ್ಕಳಿಗೆ ಆದರ್ಶ

■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಮಕ್ಕಳ ವ್ಯಕ್ತಿತ್ವ ವಿಕಸನ ಸಾಕಾರಗೊಳ್ಳಬೇಕಾದರೆ ಪಾಲಕರು ಮಕ್ಕಳ ಆಸೆ–ಆಕಾಂಕ್ಷೆಗಳನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ಅವಕಾಶ ಕಲ್ಪಿಸಬೇಕು ಎಂದು ಗದಗ ಸರಕಾರಿ ಪದವಿ ಪೂರ್ವ ಮಹಾವಿದ್ಯಾಲಯದ ಕನ್ನಡ ಉಪನ್ಯಾಸಕ ಮಂಜುನಾಥ ಅಕ್ಕಸಾಲಿ ಹೇಳಿದರು.

ಬೆಟಗೇರಿಯ ಕಾಳಿಕಾದೇವಿ ದೇವಸ್ಥಾನದಲ್ಲಿ ಆಯೋಜಿಸಿದ್ದ ಮಾಸಿಕ ಚಿಂತನಗೋಷ್ಠಿ, ಮೌನೇಶ್ವರ ವಚನ ಪಠಣ, ಭಕ್ತರ ಹುಟ್ಟುಹಬ್ಬ ಹಾಗೂ ವಿವಾಹ ವಾರ್ಷಿಕೋತ್ಸವ ಸಮಾರಂಭದಲ್ಲಿ ಅತಿಥಿ ಉಪನ್ಯಾಸಕರಾಗಿ ಅವರು ಮಾತನಾಡಿದರು.

ಮಕ್ಕಳ ಆಸಕ್ತಿಗೆ ಅನುಗುಣವಾಗಿ ಓದು, ಕ್ರೀಡೆ ಹಾಗೂ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸಲು ವೇದಿಕೆ ಒದಗಿಸಬೇಕು. ಇಷ್ಟವಿಲ್ಲದ ವಿಷಯಗಳನ್ನು ಓದಲು ಒತ್ತಾಯಿಸಬಾರದು. ಪ್ರತಿಯೊಬ್ಬ ಮಗುವಿನ ಪ್ರತಿಭೆ ವಿಭಿನ್ನವಾಗಿದ್ದು, ಎಲ್ಲರನ್ನೂ ಒಂದೇ



ಮಾನದಂಡದಿಂದ ಅಳೆಯುವುದು ತಪ್ಪು ಎಂದು ಹೇಳಿದರು.

ಮಕ್ಕಳು ಸನ್ಮಾರ್ಗದಲ್ಲಿ ನಡೆದು ಆದರ್ಶ ವ್ಯಕ್ತಿಗಳಾಗಿ ಬೆಳೆಯಬೇಕಾದರೆ ಪಾಲಕರ ಆಚಾರ–ವಿಚಾರ, ನಡೆ–ನುಡಿ ಹಾಗೂ ಜೀವನಶೈಲಿ ಪ್ರಮುಖ ಪಾತ್ರ ವಹಿಸುತ್ತದೆ. ಮಕ್ಕಳ ವರ್ತನೆಗಳನ್ನು ಸೂಕ್ಷ್ಮವಾಗಿ ಗಮನಿಸಿ ಅವರಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಿದಾಗ ವ್ಯಕ್ತಿತ್ವ ವಿಕಸನ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಲೊಯಲಾ ಇಂಗ್ಲಿಷ್ ಮಾಧ್ಯಮ ಶಾಲೆಯ 5ನೇ ತರಗತಿ ವಿದ್ಯಾರ್ಥಿನಿ ತನ್ವಿ ಪ್ರಸನ್ನ ಅರ್ಕಸಾಲಿ ಮೌನೇಶ್ವರ ವಚನ ಪಠಣದ ಮೂಲಕ ಗಮನ ಸೆಳೆದಳು. ಬಾಲವಿನಾಯಕ ಶಾಲೆಯ ವಿದ್ಯಾರ್ಥಿನಿ ಸುಧೀಕ್ಷಾ ವಿಶ್ವನಾಥ ಕಮ್ಮಾರ ನೃತ್ಯ ಪ್ರದರ್ಶನ ನೀಡಿ ಭಕ್ತರನ್ನು ರಂಜಿಸಿದಳು.

ದೇವಸ್ಥಾನದ ಸಾಂಸ್ಕೃತಿಕ ವಿಭಾಗದ ಸಂಚಾಲಕ ವಿಶ್ವನಾಥ ಯ. ಕಮ್ಮಾರ, ವಿಜಯಕುಮಾರ ಬೆಂತೂರ, ಮಹೇಶ ಬಡಿಗೇರ ಸೇರಿದಂತೆ ಭಕ್ತರು ಕಾಳಿಕಾಸ್ತುತಿ ನೆರವೇರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್ ಅಧ್ಯಕ್ಷ ಶ್ರೀಧರ ಕೊಣ್ಣೂರ ಮಾತನಾಡಿ, ಪ್ರತಿ ತಿಂಗಳು ನಡೆಯುವ ಇಂತಹ ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮಗಳಿಗೆ ಸಮಾಜದ ಪ್ರತಿಯೊಬ್ಬರೂ ಭಾಗವಹಿಸಿ ಮೆರಗು ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿವಾಹ ವಾರ್ಷಿಕೋತ್ಸವ ಹಾಗೂ ಹುಟ್ಟುಹಬ್ಬ ಆಚರಿಸಿಕೊಂಡ ಕುಟುಂಬಗಳನ್ನು ಗೌರವಿಸಲಾಯಿತು. ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ದೇಣಿಗೆ ನೀಡಿದ ದಾನಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು, ಮಹಿಳಾ ಮಂಡಳದ ಪದಾಧಿಕಾರಿಗಳು, ಟ್ರಸ್ಟ್ ಸದಸ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.


### ಸೋಮೇಶ್ವರ ದೇವಸ್ಥಾನ ಸುತ್ತ ಮಾಂಸ ಮಾರಾಟ ನಿಲ್ಲಿಸಲು ಶ್ರೀರಾಮ ಸೇನಾ ಒತ್ತಾಯ

## ಬಕ್ರೀದ್ ವೇಳೆ ಗೋಹತ್ಯೆ ತಡೆಗೆ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಸಮೀಪದಲ್ಲಿರುವ ಮಾಂಸ ಮಾರಾಟದ ಅಂಗಡಿಗಳನ್ನು ಸ್ಥಳಾಂತರಿಸಬೇಕು ಹಾಗೂ ಬಕ್ರೀದ್ ವೇಳೆ ಗೋಹತ್ಯೆ ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಶ್ರೀರಾಮ ಸೇನಾ ಹಾಗೂ ಹಿಂದೂ ರಾಷ್ಟ್ರ ಸಮನ್ವಯ ಸಮಿತಿ ವತಿಯಿಂದ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಬುಧವಾರ ತಹಸೀಲ್ದಾರ ಕಚೇರಿಯಲ್ಲಿ ಗ್ರೇಡ್–2 ತಹಸೀಲ್ದಾರ ಮಂಜುನಾಥ ಅಮಾಸಿ ಅವರಿಗೆ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಶ್ರೀರಾಮ ಸೇನಾ ತಾಲೂಕು ಅಧ್ಯಕ್ಷ ಈರಣ್ಣ ಪೂಜಾರ ಹಾಗೂ ಹಿಂದೂ ಯುವ ಮುಖಂಡ ಗಂಗಾಧರ ಮೆಣಸಿನಕಾಯಿ, ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನ ಪವಿತ್ರ ಧಾರ್ಮಿಕ



ಕ್ಷೇತ್ರವಾಗಿದ್ದು ಪ್ರತಿದಿನ ಸಾವಿರಾರು ಭಕ್ತರು ಆಗಮಿಸುತ್ತಾರೆ. ದೇವಸ್ಥಾನದ ಕೂಗಳತೆಯಲ್ಲೇ ಮೀನು, ಮಟನ್ ಹಾಗೂ ಚಿಕನ್ ಮಾರಾಟ ನಡೆಯುತ್ತಿರುವುದು ಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುತ್ತಿದೆ ಎಂದು ಆರೋಪಿಸಿದರು.

ಕೂಡಲೇ ಮಾಂಸ ಮಾರಾಟದ ಅಂಗಡಿಗಳನ್ನು 15 ದಿನಗಳೊಳಗೆ ಪಟ್ಟಣದ ಹೊರಭಾಗಕ್ಕೆ ಸ್ಥಳಾಂತರಿಸಬೇಕು. ಅಕ್ರಮ ಕಸಾಯಿಖಾನೆಗಳಿಗೆ ಅಧಿಕಾರಿಗಳು ಭೇಟಿ ನೀಡಿ ನೋಟಿಸ್ ಜಾರಿ ಮಾಡಿ ತೆರವುಗೊಳಿಸಬೇಕು. ಬಕ್ರೀದ್ ವೇಳೆ ಗೋಹತ್ಯೆ ಹಾಗೂ ಅಕ್ರಮ ಮಾಂಸ ಮಾರಾಟ ನಡೆಯದಂತೆ ಪೊಲೀಸ್ ಇಲಾಖೆ ಹಾಗೂ ಪುರಸಭೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಶಾಲೆ ಹಾಗೂ ಕಾಲೇಜುಗಳಲ್ಲಿ ಹಿಜಾಬ್‌ಗೆ ಅವಕಾಶ ನೀಡಿ ಕೇಸರಿ ಶಾಲು ನಿರ್ಬಂಧಿಸುವ ಸರ್ಕಾರದ ನಿರ್ಧಾರವನ್ನು ಹಿಂಪಡೆಯಬೇಕು. ಇಲ್ಲವಾದರೆ ಹಿಂದೂ ಸಂಘಟನೆಗಳಿಂದ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ದುಂಡೇಶ ಕೋಟಗಿ, ವಿಜಯ ಕುಂಬಾರ, ಶಕ್ತಿ ಕತ್ತಿ, ವಿಶಾಲ ಬಟಗುರ್ಕಿ, ನವೀನ ಹಿರೇಮಠ, ಮಹಾಂತೇಶ ರಗಟಿ, ಅಮಿತ ಗುಡಗೇರಿ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಲೋಕಕಲ್ಯಾಣಕ್ಕಾಗಿ ಶ್ರೀಗಳ ಮೌನ ಶಿವಾನುಷ್ಠಾನ



■ ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಜಿಲ್ಲೆಯ ಶಿಕಾರಿಪುರ ತಾಲೂಕಿನ ತಪೋಕ್ಷೇತ್ರ ಕಡೇನಂದಿಹಳ್ಳಿಯ ಶ್ರೀ ಮಳೆ ಮಲ್ಲೇಶ್ವರಸ್ವಾಮಿ ಜಾಗೃತ ಕ್ಷೇತ್ರದಲ್ಲಿರುವ ಶ್ರೀಮದ್ ರಂಭಾಪುರಿ ಶಾಖಾ ಮಠದ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ನೂತನ ಪಟ್ಟಾಧಿಕಾರ ಸ್ವೀಕರಿಸಿದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮೀಜಿಗಳು ಮಂಗಳವಾರದಿಂದ ಐದು ದಿನಗಳ ಮೌನ ಶಿವಾನುಷ್ಠಾನ ಆರಂಭಿಸಿದರು.

ಅಧಿಕ ಜೇಷ್ಠ ಮಾಸದ ಪ್ರಯುಕ್ತ ಲೋಕಕಲ್ಯಾಣ ಹಾಗೂ ಭಕ್ತರ ಮನೋವಾಂಛೆ ಸಿದ್ಧಿಗಾಗಿ ಈ ವಿಶೇಷ ಮೌನ ಶಿವಾನುಷ್ಠಾನ ಕೈಗೊಳ್ಳಲಾಗಿದ್ದು, ಮೇ 30ರವರೆಗೆ ನಡೆಯಲಿದೆ.

ಮೇ 31ರಂದು ಮೌನ ಶಿವಾನುಷ್ಠಾನ ಮಂಗಲ ಹಾಗೂ ಶ್ರೀ ಗುರು ಪಟ್ಟಾಧಿಕಾರ ಅಭಿನಂದನಾ ಸಮಾರಂಭ ಜರುಗಲಿದೆ. ಅಂದು ಬ್ರಾಹ್ಮೀ ಮುಹೂರ್ತದಲ್ಲಿ ಶ್ರೀಮಠದ ದೈವಗಳಿಗೆ ವಿಶೇಷ ಪೂಜೆ, ತೀರ್ಥಪ್ರಸಾದ ವಿನಿಯೋಗ ನಡೆಯಲಿದೆ. ಬಳಿಕ ಶ್ರೀಗಳು ನೆಲಮಾಳಿಗೆಯಲ್ಲಿ ಇಷ್ಟಲಿಂಗ ಪೂಜೆ ನೆರವೇರಿಸಿ ಮೌನಾನುಷ್ಠಾನ ಮಂಗಲಗೊಳಿಸಲಿದ್ದಾರೆ.

ನಂತರ ಬೆಳಿಗ್ಗೆ 11 ಗಂಟೆಗೆ ಭಕ್ತರಿಗೆ ಶ್ರೀಗಳ ದರ್ಶನ ಹಾಗೂ ಆಶೀರ್ವಚನ ಕಾರ್ಯಕ್ರಮ ನಡೆಯಲಿದೆ. ಇದೇ ಸಂದರ್ಭದಲ್ಲಿ ಶ್ರೀಮಠದ ಹಿತೈಷಿಗಳಾದ ಸಂಸದ ಬಿ.ವೈ. ರಾಘವೇಂದ್ರ ಅವರಿಗೆ ವಿಶೇಷ ಗೌರವ ಸಮರ್ಪಣೆ ಮಾಡಲಾಗುವುದು.

ಐದು ದಿನಗಳ ಮೌನ ಶಿವಾನುಷ್ಠಾನದ ಅವಧಿಯಲ್ಲಿ ಶ್ರೀಗಳ ದರ್ಶನಕ್ಕೆ ಅವಕಾಶ ಇರುವುದಿಲ್ಲ. ಪ್ರತಿಮಾಸದ ಹುಣ್ಣಿಮೆಯಂತೆ ಭಕ್ತರಿಗೆ ಶ್ರೀಗಳ ದರ್ಶನಾಶೀರ್ವಾದ ಲಭ್ಯವಿರುತ್ತದೆ ಎಂದು ಶ್ರೀ ಗುರು ರೇವಣಸಿದ್ಧೇಶ್ವರ ಜನಕಲ್ಯಾಣ ಟ್ರಸ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.

ಪ್ರವಾದಿ ಇಬ್ರಾಹೀಮ್ (ಅ) ಅವರ ಉದಾತ್ತ ಬದುಕಿನ ಸ್ಮರಣೆ; ಸಹೋದರತ್ವ, ದಾನಧರ್ಮ ಮತ್ತು ದೇವಭಕ್ತಿಯ ಪ್ರತೀಕ ಈದುಲ್ ಅಝ್ಹಾ ನಿಮಿತ್ತ ಲೇಖನ

# ತ್ಯಾಗ, ಸಮರ್ಪಣೆ- ಮಾನವೀಯತೆಯ ಸಂದೇಶವೇ ಬಕ್ರೀದ್

ಮುಸ್ಲಿಮರ ಪ್ರಮುಖ ಧಾರ್ಮಿಕ ಹಬ್ಬಗಳಲ್ಲಿ ಒಂದಾದ ಬಕ್ರೀದ್ ಅಥವಾ ಈದುಲ್ ಅಝ್ಹಾವನ್ನು ವಿಶ್ವದಾದ್ಯಂತ ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಗುತ್ತದೆ. ಇಸ್ಲಾಮೀ ಕ್ಯಾಲೆಂಡರಿನ ದುಲ್‌ಹಜ್ ತಿಂಗಳ 10ರಂದು ಆಚರಿಸಲಾಗುವ ಈ ಹಬ್ಬವು ತ್ಯಾಗ, ಸಮರ್ಪಣೆ, ದೇವಭಕ್ತಿ ಹಾಗೂ ಮಾನವೀಯ ಮೌಲ್ಯಗಳ ಸಂಕೇತವಾಗಿದೆ.

ಸುಮಾರು ಐದು ಸಾವಿರ ವರ್ಷಗಳ ಹಿಂದಿನ ಪ್ರವಾದಿ ಇಬ್ರಾಹೀಮ್ (ಅ) ಅವರ ಬದುಕಿನ ಘಟನೆಗಳನ್ನು ಬಕ್ರೀದ್ ಹಬ್ಬ ನೆನಪಿಸುತ್ತದೆ. ಯಹೂದಿಗಳು, ಕ್ರೈಸ್ತರು ಹಾಗೂ ಮುಸ್ಲಿಮರು ಸಮಾನವಾಗಿ ಗೌರವಿಸುವ ಮಹಾನ್ ವ್ಯಕ್ತಿತ್ವವಾಗಿರುವ ಇಬ್ರಾಹೀಮ್ (ಅಬ್ರಾಹಂ) ಅವರು ಏಕದೇವತ್ವದ ಸಂದೇಶ ಸಾರಿದ ಪ್ರವಾದಿಯಾಗಿದ್ದರು. ಇರಾಕ್‌ನ ಉರ್ ನಗರದಲ್ಲಿ ಜನಿಸಿದ ಅವರು, ದುಷ್ಟ ರಾಜ ನಮ್ರೂದ್‌ನ ದಬ್ಬಾಳಿಕೆ ವಿರುದ್ಧ ಧ್ವನಿ ಎತ್ತಿ ಸಮಾಜ ಸುಧಾರಣೆಯ ಹಾದಿ ಹಿಡಿದರು. ಅನೇಕ ಸಂಕಷ್ಟ, ಹಿಂಸೆ, ದೇಶಭ್ರಷ್ಟ ಪರಿಸ್ಥಿತಿಗಳ ನಡುವೆಯೂ ದೇವರ ಮಾರ್ಗದಿಂದ ಹಿಂದೆ ಸರಿಯಲಿಲ್ಲ.



ಪ್ರವಾದಿ ಇಬ್ರಾಹೀಮ್ (ಅ) ಅವರ ಬದುಕು ಅನೇಕ ಸತ್ವಪರೀಕ್ಷೆಗಳಿಂದ ಕೂಡಿತ್ತು. ವೃದ್ಧಾಪ್ಯದಲ್ಲಿ ಪತ್ನಿ ಹಾಜಿರಾ ಮತ್ತು ಪುಟ್ಟ ಮಗ ಇಸ್ಮಾಯಿಲ್ ಅವರನ್ನು ಅರೇಬಿಯಾದ ನಿರ್ಜನ ಮರುಭೂಮಿಯಲ್ಲಿ ಬಿಟ್ಟುಬರಬೇಕಾದ ಸಂದರ್ಭ ಎದುರಾದರೂ ದೇವಾಜ್ಞೆಗೆ ಶರಣಾದರು. ದಾಹದಿಂದ ಅಳುತ್ತಿದ್ದ ಮಗುವಿಗಾಗಿ ತಾಯಿ ಹಾಜಿರಾ ಸಫಾ ಮತ್ತು ಮರ್ವಾ ಬೆಟ್ಟಗಳ ನಡುವೆ ನೀರಿಗಾಗಿ ಓಡಾಡಿದ ಘಟನೆ ಇಂದಿಗೂ ಹಜ್ ಯಾತ್ರೆಯ ಪ್ರಮುಖ ಆಚರಣೆಯಾಗಿದೆ. ಇದೇ ವೇಳೆ ಇಸ್ಮಾಯಿಲ್ ಅವರ ಕಾಲಿನ ಬಳಿಯಲ್ಲಿ ಉಕ್ಕಿಬಂದ ನೀರಿನ ಚಿಲುಮೆಯೇ ಪವಿತ್ರ ಝಮ್ ಝಮ್ ಎಂದು ಪ್ರಸಿದ್ಧಿಯಾಯಿತು.

ಇಬ್ರಾಹೀಮ್ (ಅ) ಅವರ ಪುತ್ರ ಪ್ರೀತಿ ಹಾಗೂ ದೇವಭಕ್ತಿಯನ್ನು ಪರೀಕ್ಷಿಸಲು ಅಲ್ಲಾಹನು ಪುತ್ರ ಇಸ್ಮಾಯಿಲ್ ಅವರನ್ನು ಬಲಿಕೊಡಬೇಕೆಂದು ಆದೇಶಿಸಿದನೆಂದು ಇಸ್ಲಾಮಿನ ಇತಿಹಾಸ ಹೇಳುತ್ತದೆ. ದೇವರ ಆಜ್ಞೆಗೆ ತಲೆಬಾಗಿದ ಇಬ್ರಾಹೀಮ್ (ಅ) ಪುತ್ರನನ್ನು ಬಲಿಕೊಡಲು ಮುಂದಾದಾಗ, ಅಲ್ಲಾಹನು ಟಗರನ್ನು ಬಲಿಯಾಗಿ ಅರ್ಪಿಸುವಂತೆ ಸೂಚಿಸಿದನು. ಈ ಘಟನೆಯ ಸ್ಮರಣಾರ್ಥವೇ ಬಕ್ರೀದ್ ಹಬ್ಬ ಆಚರಿಸಲಾಗುತ್ತದೆ.

ಹಬ್ಬದ ದಿನ ಮುಸ್ಲಿಮರು ಮಸೀದಿ ಹಾಗೂ ಈದ್ಗಾಗಳಲ್ಲಿ ವಿಶೇಷ ನಮಾಜ್ ಮತ್ತು ಖುತ್ಬಾಗಳಲ್ಲಿ ಭಾಗವಹಿಸುತ್ತಾರೆ. ಹೊಸ ಉಡುಗೆ ತೊಟ್ಟು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ಬಂಧು-ಮಿತ್ರರ ಮನೆಗಳಿಗೆ ಭೇಟಿ ನೀಡುತ್ತಾರೆ. ಬಲಿ ಅರ್ಪಿಸಿದ ಪ್ರಾಣಿಯ ಮಾಂಸವನ್ನು ಮೂರು ಭಾಗಗಳಾಗಿ ಹಂಚಿ, ಒಂದು ಭಾಗವನ್ನು ಬಡವರಿಗೆ ನೀಡುವ ಮೂಲಕ ಸಹೋದರತ್ವ ಮತ್ತು ಹಂಚಿಕೆ ಸಂಸ್ಕೃತಿಯನ್ನು ಈ ಹಬ್ಬ ಸಾರುತ್ತದೆ.

ಬಕ್ರೀದ್ ಹಬ್ಬವು ಕೇವಲ ಧಾರ್ಮಿಕ ಆಚರಣೆ ಮಾತ್ರವಲ್ಲ; ಅದು ತ್ಯಾಗ, ದಾನಧರ್ಮ, ಸಹಾನುಭೂತಿ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಂದೇಶವನ್ನು ಸಾರುವ ಹಬ್ಬವಾಗಿದೆ.

– ಡಾ. ತಯಬಅಲಿ ಅ. ಹೊಂಬಳ, ಗದಗ

ಮೇ 31ರಂದು ಸಾವಿರಾರು ಜನರ ಸಮ್ಮುಖದಲ್ಲಿ ಬೃಹತ್ ಸಮಾವೇಶ : ರಾಜು ಖಾನಪ್ಪನವರ

# ಸನಾತನ ಸಂರಕ್ಷಣೆಗೆ ಹಿಂದೂ ಸಮಾವೇಶ!



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸನಾತನ ಹಿಂದೂ ಧರ್ಮದ ವಿರುದ್ಧ ಹುನ್ನಾರ ನಡೆಸುತ್ತಿರುವ ಪಟ್ಟಭದ್ರ ಹಿತಾಸಕ್ತಿಗಳಿಗೆ ತಕ್ಕ ಸಂದೇಶ ನೀಡುವ ಉದ್ದೇಶದಿಂದ ಮೇ 31ರಂದು ಗದಗದಲ್ಲಿ ಬೃಹತ್ ಹಿಂದೂ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಸಮಾವೇಶದ ಸಂಚಾಲಕ ರಾಜು ಖಾನಪ್ಪನವರ ಹೇಳಿದರು.

ಶಿರಹಟ್ಟಿಯ ಟೀಚರ್ ಸೊಸೈಟಿಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಿಂದೂ ಸರ್ವ ಸಮಾಜಗಳ ಒಕ್ಕೂಟದ ವತಿಯಿಂದ ಬಸವಾದಿ ಶಿವಶರಣರ ನೇತೃತ್ವದಲ್ಲಿ ಈ ಮಹಾಸಮಾವೇಶ ಆಯೋಜಿಸಲಾಗುತ್ತಿದೆ ಎಂದರು.

ಗದಗ ನಗರದ ವಿಡಿಎಸ್ಟಿಸಿ ಮೈದಾನದಲ್ಲಿ ನಡೆಯಲಿರುವ ಸಮಾವೇಶದಲ್ಲಿ ಕನ್ಹೇರಿ ಮಠದ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮೀಜಿ ಸೇರಿದಂತೆ ಅನೇಕ ಮಠಾಧೀಶರು ಭಾಗವಹಿಸಲಿದ್ದಾರೆ. ಸಾವಯವ ಕೃಷಿ ಕುರಿತಂತೆ ರೈತರಿಗೆ ತಜ್ಞ-ರಿಂದ ಮಾರ್ಗದರ್ಶನವೂ ಇರಲಿದ್ದು, ಜಿಲ್ಲೆಯ ರೈತರು ಹಾಗೂ ಹಿಂದೂ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಸಂಘಟನೆಯ ಮುಖಂಡ ಸಂತೋಷ ಕುರಿ ಮಾತನಾಡಿ, ಮೇ 31ರಂದು ಮಧ್ಯಾಹ್ನ 3.30ಕ್ಕೆ ಭೂಮರಡ್ಡಿ ಸರ್ಕಲ್‌ನಿಂದ ಕುಂಭ ಮೆರವಣಿಗೆ ಆರಂಭವಾಗಲಿದ್ದು, ಎರಡು ರಿಂದ ಮೂರು ಸಾವಿರ ಮಹಿಳೆಯರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದರು. ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸಂಜೆ 5.30ಕ್ಕೆ ವಿಡಿಎಸ್ಟಿ ಮೈದಾನದಲ್ಲಿ ಬೃಹತ್ ಸಮಾವೇಶವಾಗಿ ರೂಪುಗೊಳ್ಳಲಿದೆ ಎಂದು ಹೇಳಿದರು.

> "ಹಿಂದೂ ಸಮಾಜದ ಐಕ್ಯತೆ ಮತ್ತು ಜಾಗೃತಿಯೇ ಸಮಾವೇಶದ ಪ್ರಮುಖ ಉದ್ದೇಶ."
> – ರಾಜು ಖಾನಪ್ಪನವರ

ಈ ಮಹಾಸಭೆಯಲ್ಲಿ 25ರಿಂದ 30 ಸಾವಿರ ಜನ ಭಾಗವಹಿಸುವ ಸಾಧ್ಯತೆ ಇದ್ದು, 300ಕ್ಕೂ ಹೆಚ್ಚು ಮಠಗಳ ಮಠಾಧೀಶರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಶ್ರೀಧರ್ ಕುಲಕರ್ಣಿ, ರಾಜೀವರಡ್ಡಿ ಬಮ್ಮನಕಟ್ಟಿ, ವೆಂಕಟೇಶ್ ಕುಲಕರ್ಣಿ, ತಿಪ್ಪಣ್ಣ ಕೊಂಚಗೇರಿ, ಯಲ್ಲಪ್ಪಗೌಡ ಅಣ್ಣಿಗೇರಿ, ರಾಮಣ್ಣ ಕಂಬಳಿ, ಬಸವರಾಜ ತುಳಿ, ಗೂಳಪ್ಪ ಕರಿಗಾರ, ಪರಶುರಾಮ ಡೊಂಕಬಳ್ಳಿ, ನೀಲಪ್ಪ ಖಾನಾಪುರ, ನಾಗರಾಜ ಇಂಗಳಗಿ, ಫಕೀರೇಶ ಕರಿಗಾರ, ಸಂತೋಷ ಸೊಂಟನೂರ, ವಿರುಪಾಕ್ಷಿ ಹಿರೇಮಠ, ದೇವು ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸ್ವಾರ್ಥದ ಯುಗದಲ್ಲಿ ತ್ಯಾಗದ ಸಂದೇಶ ಹೊತ್ತ ಬಕ್ರೀದ್

## ತ್ಯಾಗ, ಬಲಿದಾನದಿಂದಲೇ ಧರ್ಮದ ಹಾದಿ ಪವಿತ್ರ

ಮಾನವ ಜೀವನದಲ್ಲಿ ಹಬ್ಬಗಳು ಕೇವಲ ಸಂಭ್ರಮದ ದಿನಗಳಲ್ಲ; ಅವು ಸಮಾಜದ ಮೌಲ್ಯಗಳನ್ನು ನೆನಪಿಸುವ ಸಂಸ್ಕೃತಿಯ ಪ್ರತಿಬಿಂಬಗಳಾಗಿವೆ. ಅಂತಹ ಪವಿತ್ರ ಹಬ್ಬಗಳಲ್ಲಿ ಇಸ್ಲಾಂ ಧರ್ಮದ ಮಹತ್ವದ ಹಬ್ಬವಾದ ಬಕ್ರೀದ್ ಅಥವಾ ಈದ್-ಉಲ್-ಅಝ್ಹಾ ವಿಶಿಷ್ಟ ಸ್ಥಾನ ಪಡೆದಿದೆ. ತ್ಯಾಗ ಮತ್ತು ಬಲಿದಾನ ಎಂಬ ಮಹಾನ್ ಮೌಲ್ಯಗಳ ಮೇಲೆ ನಿಂತಿರುವ ಈ ಹಬ್ಬವು ಆತ್ಮಶುದ್ಧಿ, ಮಾನವೀಯತೆ ಮತ್ತು ಸಮಾಜದ ಹೊಣೆಗಾರಿಕೆಯ ಸಂದೇಶ ಸಾರುತ್ತದೆ.

ಬಕ್ರೀದ್ ಹಬ್ಬದ ಮೂಲದಲ್ಲಿ ಪ್ರವಾದಿ ಹಜರತ್ ಇಬ್ರಾಹಿಂ (ಅ) ಅವರ ಅಪಾರ ಭಕ್ತಿ ಮತ್ತು ತ್ಯಾಗದ ಸಂದೇಶ ಅಡಗಿದೆ. ಅಲ್ಲಾಹನ ಆದೇಶಕ್ಕೆ ಶರಣಾಗಿ ತಮ್ಮ ಪ್ರಿಯ ಪುತ್ರನನ್ನೇ ಬಲಿಕೊಡಲು ಸಿದ್ಧರಾದ ಅವರ ನಿಷ್ಠೆ ಇಡೀ ಮಾನವಕುಲಕ್ಕೆ ಆದರ್ಶವಾಗಿದೆ. ಕೊನೆಗೆ ಅಲ್ಲಾಹ ಅವರು ಅವರ ವಿಧೇಯತೆಯನ್ನು ಸ್ವೀಕರಿಸಿ ಪುತ್ರನ ಬದಲು ಪ್ರಾಣಿಯನ್ನು ಬಲಿಯಾಗಿ ಒಪ್ಪಿಕೊಂಡ ಘಟನೆಯು ತ್ಯಾಗದ ಅತ್ಯುನ್ನತ ಸಂಕೇತವಾಗಿ ಉಳಿದಿದೆ.

ಈ ಹಬ್ಬ ನಮಗೆ ಕಲಿಸುವುದು ಕೇವಲ ಪ್ರಾಣಿಯ ಬಲಿ ಅಲ್ಲ; ಅಹಂಕಾರ, ದ್ವೇಷ, ದುರಾಸೆ ಮತ್ತು ಸ್ವಾರ್ಥವನ್ನು ತ್ಯಜಿಸುವುದೇ ನಿಜವಾದ ಬಲಿದಾನ ಎಂಬ ಸತ್ಯ. ಇಂದಿನ ಸಮಾಜದಲ್ಲಿ ಹಣ, ಅಧಿಕಾರ ಮತ್ತು ಸ್ವಾರ್ಥವೇ ಮುಖ್ಯವಾಗುತ್ತಿರುವ ಸಂದರ್ಭದಲ್ಲಿ ಬಕ್ರೀದ್ ಮನುಷ್ಯನಿಗೆ ಮಾನವೀಯತೆಯ ದಾರಿ ತೋರಿಸುತ್ತದೆ.

ಬಕ್ರೀದ್ ಹಬ್ಬದಲ್ಲಿ ಬಲಿಯಾದ ಮಾಂಸವನ್ನು ಕುಟುಂಬ, ಸಂಬಂಧಿಕರು ಮತ್ತು ಬಡವರ ನಡುವೆ ಹಂಚುವ ಪದ್ಧತಿ ಇದೆ. ಇದು ಸಮಾನತೆ ಮತ್ತು ಸಹಾನುಭೂತಿಯ ಮಹಾನ್ ಸಂದೇಶವಾಗಿದೆ. ಹಸಿದವನ ಹೊಟ್ಟೆ ತುಂಬಿದಾಗಲೇ ಹಬ್ಬಕ್ಕೆ ನಿಜವಾದ ಅರ್ಥ ಬರುತ್ತದೆ ಎಂಬ ಮಾನವೀಯ ಮೌಲ್ಯ ಇದರಲ್ಲಿ ಅಡಗಿದೆ.




ಇಂದು ಸಮಾಜದಲ್ಲಿ ಧರ್ಮದ ಹೆಸರಿನಲ್ಲಿ ದ್ವೇಷ ಮತ್ತು ವಿಭಜನೆ ಹೆಚ್ಚಾಗುತ್ತಿರುವುದು ವಿಷಾದನೀಯ. ಆದರೆ ನಿಜವಾದ ಧರ್ಮ ಮನುಷ್ಯನನ್ನು ವಿನಯಶೀಲನನ್ನಾಗಿ, ಸಹೃದಯನನ್ನಾಗಿ ಮಾಡಬೇಕು. ಬಕ್ರೀದ್ ಹಬ್ಬವು ಧರ್ಮಗಳ ನಡುವೆ ಸೌಹಾರ್ದ, ಸಹಬಾಳ್ವೆ ಮತ್ತು ಸಹೋದರತ್ವ ಬೆಳೆಸುವ ಸಂದೇಶ ನೀಡುತ್ತದೆ.

ಪ್ರಸ್ತುತ ಯುವ ಪೀಳಿಗೆ ಯಶಸ್ಸು ಮತ್ತು ಹಣದ ಹಿಂದೆ ಓಡುತ್ತಿರುವ ಸಂದರ್ಭದಲ್ಲಿ ಸಮಾಜದ ಬಗ್ಗೆ ಹೊಣೆಗಾರಿಕೆ ಬೆಳೆಸಿಕೊಳ್ಳುವುದು ಅಗತ್ಯವಾಗಿದೆ. ದೇಶಕ್ಕೆ ಇಂದು ಬೇಕಾಗಿರುವುದು ತ್ಯಾಗ ಮನೋಭಾವದ ಯುವಕರು. ಕುಟುಂಬ, ಸಮಾಜ ಮತ್ತು ದೇಶಕ್ಕಾಗಿ ದುಡಿಯುವ ಮನಸ್ಸು ಬೆಳೆದಾಗ ಮಾತ್ರ ನಿಜವಾದ ಧರ್ಮ ಉಳಿಯುತ್ತದೆ.

ಬಕ್ರೀದ್ ಹಬ್ಬವು ಕೇವಲ ಧಾರ್ಮಿಕ ಆಚರಣೆ ಅಲ್ಲ; ಅದು ಮನುಷ್ಯನೊಳಗಿನ ಮಾನವೀಯತೆಯನ್ನು ಎಬ್ಬಿಸುವ ಆತ್ಮಪರಿಶೀಲನೆಯ ಹಬ್ಬ. ತ್ಯಾಗ ಮತ್ತು ಬಲಿದಾನದಿಂದಲೇ ಧರ್ಮದ ಹಾದಿ ಪವಿತ್ರವಾಗುತ್ತದೆ ಎಂಬ ಸಂದೇಶವನ್ನು ಈ ಹಬ್ಬ ಸಾರುತ್ತದೆ.



– ಸಿಕಂದರ ಎಂ.ಆರಿ
ಪತ್ರಕರ್ತರು/ವಕೀಲರು

ನರೇಗಲ್ಲ ರೈತ ಸಂಪರ್ಕ ಕೇಂದ್ರದಲ್ಲಿ ಹೆಸರು ಬೀಜಕ್ಕೆ ಹೆಚ್ಚಿದ ಬೇಡಿಕೆ

# ಬೀಜ ಖರೀದಿಗೆ ಮುಗಿಬಿದ್ದ ರೈತರು!

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೋಹಿಣಿ ಮಳೆ ಆರಂಭವಾಗುತ್ತಿದ್ದಂತೆಯೇ ಮುಂಗಾರು ಬಿತ್ತನೆ ಚಟುವಟಿಕೆಗಳು ಚುರುಕುಗೊಂಡಿದ್ದು, ನರೇಗಲ್ಲ ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜ ಖರೀದಿಸಲು ರೈತರು ಮುಗಿಬಿದ್ದ ದೃಶ್ಯ ಮಂಗಳವಾರ ಕಂಡು ಬಂತು.

ಹೆಸರು ಬಿತ್ತನೆಗೆ ಸೂಕ್ತ ಸಮಯವಾಗಿರುವ ಹಿನ್ನೆಲೆಯಲ್ಲಿ ರೈತರು ಬೆಳಗ್ಗಿನಿಂದಲೇ ರೈತ ಸಂಪರ್ಕ ಕೇಂದ್ರದ ಮುಂದೆ ಸಾಲುಗಟ್ಟಿ ನಿಂತು ಬೀಜ ಖರೀದಿಸಿದರು.

ನರೇಗಲ್ಲ ಹೋಬಳಿ ತಾಲೂಕಿನ ಅತಿದೊಡ್ಡ ಹೋಬಳಿಯಾಗಿದ್ದು, ಈ ಬಾರಿ ಒಟ್ಟು 37,679 ಹೆಕ್ಟೇರ್ ಪ್ರದೇಶದಲ್ಲಿ ಮುಂಗಾರು ಬಿತ್ತನೆ ಗುರಿ ಹೊಂದಲಾಗಿದೆ ಎಂದು ಸಹಾಯಕ ಕೃಷಿ ಅಧಿಕಾರಿ



ಬಸವರಾಜ ಗದಗಿನ ತಿಳಿಸಿದರು.
ಹೆಸರು – 17,220 ಹೆಕ್ಟೇರ್,
ಮೆಕ್ಕೆಜೋಳ – 16,920 ಹೆಕ್ಟೇರ್, ತೊ-
ಗರಿ – 150 ಹೆಕ್ಟೇರ್, ಸೂರ್ಯಕಾಂತಿ – 680 ಹೆಕ್ಟೇರ್,
ಶೇಂಗಾ – 780 ಹೆಕ್ಟೇರ್,
ಜೋಳ – 250 ಹೆಕ್ಟೇರ್,
ಇತರೆ ಬೆಳೆಗಳು – 2,459 ಹೆಕ್ಟೇರ್
ಪ್ರದೇಶದಲ್ಲಿ ಬಿತ್ತನೆಯಾಗಲಿದೆ ಎಂದು ಮಾಹಿತಿ ನೀಡಿದರು.

ರೈತ ಸಂಪರ್ಕ ಕೇಂದ್ರದಲ್ಲಿ ಹೆಸರು, ತೊಗರಿ ಹಾಗೂ ಮೆಕ್ಕೆಜೋಳದ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ.

ಹೆಸರು 5 ಕೆಜಿ ಪ್ಯಾಕೆಟ್: ಸಾಮಾನ್ಯ ರೈತರಿಗೆ ₹510, ಎಸ್‌ಸಿ/ಎಸ್‌ಟಿ ರೈತರಿಗೆ ₹447.50, ತೊಗರಿ 5 ಕೆಜಿ ಪ್ಯಾಕೆಟ್ : ಸಾಮಾನ್ಯ ರೈತರಿಗೆ ₹535, ಎಸ್‌ಸಿ/ಎಸ್‌ಟಿ ರೈತರಿಗೆ ₹472.50

ಮೆಕ್ಕೆಜೋಳದ ಬೀಜದ ದರ ಕಂಪನಿಗಳ ಆಧಾರದ ಮೇಲೆ ನಿಗದಿಯಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದರು.

"ಬಿತ್ತನೆಗೂ ಮುನ್ನ ಬೀಜೋಪಚಾರ ಮಾಡುವುದು ಅವಶ್ಯ. ಒಂದೇ ಬೆಳೆಗೆ ಅವಲಂಬಿಸದೆ ಬಹುಧಾನ್ಯ ಬೆಳೆಗಳಿಗೆ ಒತ್ತು ನೀಡಬೇಕು. ಮೆಕ್ಕೆಜೋಳಕ್ಕೆ ಹೆಚ್ಚು ತೇವಾಂಶ ಮತ್ತು ಗೊಬ್ಬರ ಅಗತ್ಯವಿದ್ದು, ಮಳೆಯ ಕೊರತೆ ಕಂಡುಬಂದರೆ ಇಳುವರಿ ಕುಸಿಯುವ ಸಾಧ್ಯತೆ ಇದೆ," ಎಂದು ಎಚ್ಚರಿಸಿದರು.

> **"ಬಹುಧಾನ್ಯ ಬಿತ್ತನೆಗೆ ಒತ್ತು ನೀಡಿ"**
>
> ಪ್ರತಿ ಎಕರೆಗೆ ಒಂದು ಕೆಜಿ ಬೀಜ ನೀಡಲಾಗುತ್ತಿದ್ದು, ಗರಿಷ್ಠ ಒಂದು 5 ಕೆಜಿ ಪ್ಯಾಕೆಟ್ ರೈತರಿಗೆ ವಿತರಿಸಲಾಗುತ್ತಿದೆ. ಈಗಾಗಲೇ ಹೋಬಳಿಯಲ್ಲಿ ಶೇ.90ರಷ್ಟು ನಿರೀಕ್ಷಿತ ಮಳೆಯಾಗಿದ್ದು, ರೈತರು ಹೊಲದ ತೇವಾಂಶ ಪರಿಶೀಲಿಸಿ ಬಿತ್ತನೆ ಆರಂಭಿಸಬಹುದು ಎಂದು ಬಸವರಾಜ ಗದಗಿನ ಸಲಹೆ ನೀಡಿದರು.

# ಅಂಕವೇ ಭವಿಷ್ಯದ ಅಡಿಗಲ್ಲು!



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಹಂತವು ವಿದ್ಯಾರ್ಥಿ ಜೀವನದ ಅತ್ಯಂತ ಮಹತ್ವದ ಘಟ್ಟವಾಗಿದ್ದು, ಈ ಅವಧಿಯಲ್ಲಿ ಗುರಿ ಹೊಂದಿ ಶ್ರಮಿಸಿದರೆ ಉಜ್ವಲ ಭವಿಷ್ಯ ನಿರ್ಮಾಣ ಸಾಧ್ಯ ಎಂದು ಶಿರಹಟ್ಟಿ ತಾಲೂಕು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಚ್.ಎಂ. ದೇವಗಿರಿ ಹೇಳಿದರು.

ಶಿರಹಟ್ಟಿಯ ಶಿಕ್ಷಕರ ಸೊಸೈಟಿಯಲ್ಲಿ ತಾಲೂಕು ನಿವೃತ್ತ ನೌಕರರ ಸಂಘದ ವತಿಯಿಂದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಗಳಿಸಿದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣವೇ ವ್ಯಕ್ತಿಯ ಬದುಕನ್ನು ರೂಪಿಸುವ ಶಕ್ತಿಯಾಗಿದೆ. ವಿದ್ಯಾರ್ಥಿಗಳು ಪ್ರಾಥಮಿಕ ಹಂತದಿಂದಲೇ ಓದಿನತ್ತ ಹೆಚ್ಚಿನ ಗಮನ ಹರಿಸಿ, ಶಿಕ್ಷಕರ ಮಾರ್ಗದರ್ಶನವನ್ನು ಮನನ ಮಾಡಿಕೊಂಡು ಆತ್ಮವಿಶ್ವಾಸದಿಂದ ಪರೀಕ್ಷೆಗಳನ್ನು ಎದುರಿಸಬೇಕು ಎಂದು ಸಲಹೆ ನೀಡಿದರು.

ಪೋಷಕರ ಕನಸುಗಳನ್ನು ಸಾಕಾರಗೊಳಿಸಲು ಸತತ ಪರಿಶ್ರಮ ಅಗತ್ಯ. ಉತ್ತಮ ಅಂಕಗಳ ಜೊತೆ-ಗೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲೂ ಸಾಧನೆ ಮಾಡಿ ಉನ್ನತ ಹುದ್ದೆಗಳನ್ನು ಅಲಂಕರಿಸುವ ಮೂಲಕ ತಾಲೂಕಿಗೆ ಕೀರ್ತಿ ತರಬೇಕೆಂದು ಕರೆ ನೀಡಿದರು.

ಸಮಾರಂಭದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಸ್ನೇಹಾ ಕರ್ಜಗಿ, ಯಾಸೀನ್ ಮಕಾನದಾರ, ಸಂತೃಪ್ತಿ ಮಾಬಳಿ ಸೇರಿದಂತೆ ಹಲವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಇಓ ಎಚ್.ಎನ್. ನಾಣ್ಕೇನಾಯ್ಕ, ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಶರಣಬಸವ ಪಾಟೀಲ, ಆರ್.ಬಿ. ಕಮತ, ಎಸ್.ಆರ್. ಸರಖವಾಸ, ಎ.ಸಿ. ಪಾಟೀಲ, ಕೆ.ಎಫ್. ರಮಜಾನವರ, ಸಿ.ಪಿ. ಕಾಳಗಿ, ವಿ.ಎಫ್. ಭಂತಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಲಕ್ಕುಂಡಿ ಪಿಡಿಒ ಅಮೀರನಾಯಕರಿಗೆ ಪ್ರತಿಷ್ಠಿತ ಗೌರವ ಪದವಿ-ಗ್ರಾಮೀಣ ಸೇವೆಗೆ ಸಾರ್ವಜನಿಕರ ಮೆಚ್ಚುಗೆ

# ಜನಸೇವೆಗೆ ಡಾಕ್ಟರೇಟ್ ಗೌರವ!

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಸೇವೆ, ಜನಪರ ಆಡಳಿತ ಹಾಗೂ ಗ್ರಾಮೀಣ ಅಭಿವೃದ್ಧಿಯ ಮೂಲಕ ಜನಮನ ಗೆದ್ದಿರುವ ಗದಗ ತಾಲೂಕಿನ ಲಕ್ಕುಂಡಿ ಗ್ರಾಮ ಪಂಚಾಯಿತಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಒ) ಅಮೀರ ನಾಯಕರಿಗೆ ಬೆಂಗಳೂರಿನ ಪ್ರತಿಷ್ಠಿತ ಏಷ್ಯಾ ಇಂಟರ್ ನ್ಯಾಷನಲ್ ಕಲ್ಚರಲ್ ಅಕಾಡೆಮಿ ವತಿಯಿಂದ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗಿದೆ.

ಬೆಂಗಳೂರಿನಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರ ಸಮ್ಮುಖದಲ್ಲಿ ಅವರಿಗೆ ಈ ಗೌರವ ನೀಡಿ ಸನ್ಮಾನಿಸಲಾಯಿತು. ಗ್ರಾಮೀಣ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಜನಪರ ಅಧಿಕಾರಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ಅಮೀರ ನಾಯಕ, ಸರಳತೆ ಮತ್ತು ಮಾನವೀಯ ಮೌಲ್ಯಗಳ ಮೂಲಕ ವಿಶಿಷ್ಟ ಗುರುತಿಸಿಕೊಂಡಿದ್ದಾರೆ.

ಅಧಿಕಾರವೆಂದರೆ ಕೇವಲ ಕಚೇರಿಯ ಗಡಿಗಳೊಳಗಿನ ವ್ಯವಸ್ಥೆಯಲ್ಲ, ಜನರ ನೋವು-ನಲಿವುಗಳಿಗೆ ಸ್ಪಂದಿಸುವ ಸೇವಾ ಧರ್ಮ ಎಂಬ ನಂಬಿಕೆಯನ್ನು ಅಮೀರ ನಾಯಕರು ತಮ್ಮ ಕಾರ್ಯಶೈಲಿಯಲ್ಲಿ ಅಳವಡಿಸಿಕೊಂಡಿದ್ದಾರೆ.

ಲಕ್ಕುಂಡಿ ಗ್ರಾಮ ಪಂಚಾಯಿತಿಯಲ್ಲಿ ಅವರ ನೇತೃತ್ವದಲ್ಲಿ ನಡೆದ ಅಭಿವೃದ್ಧಿ ಕಾಮಗಾರಿಗಳು, ಸಾರ್ವಜನಿಕ ಸಮಸ್ಯೆಗಳ ತ್ವರಿತ ಪರಿಹಾರ ಹಾಗೂ ಸಮಾಜಮುಖಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಗಿದೆ.




ಅಕಾಡೆಮಿಯ ಪದಾಧಿಕಾರಿಗಳು ಮಾತನಾಡಿ, "ಗ್ರಾಮೀಣ ಜನರ ಬದುಕಿಗೆ ಹತ್ತಿರವಾಗಿ ಕೆಲಸ ಮಾಡಿದ ಅಮೀರ ನಾಯಕರ ಸೇವಾ ಪಯಣಕ್ಕೆ ಈ ಗೌರವ ಡಾಕ್ಟರೇಟ್ ಮಹತ್ವದ ಮಾನ್ಯತೆ," ಎಂದು ಅಭಿಪ್ರಾಯಪಟ್ಟರು.

ಆಡಳಿತ ಕ್ಷೇತ್ರದ ಜೊತೆಗೆ ಸಾಹಿತ್ಯ, ಸಾಮಾಜಿಕ ಜಾಗೃತಿ ಹಾಗೂ ಮಾನವೀಯ ಮೌಲ್ಯಗಳ ಪ್ರಚಾರದಲ್ಲಿಯೂ ಅಮೀರ ನಾಯಕರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಬಡವರು, ಹಿಂದುಳಿದವರು ಹಾಗೂ ಸಂಕಷ್ಟದಲ್ಲಿರುವ ಜನರ ಪರ ಸದಾ ಸ್ಪಂದಿಸುವ ಅವರ ಸೇವಾ ಮನೋಭಾವ ಅನೇಕರಿಗೆ ಪ್ರೇರಣೆಯಾಗಿದೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಮಾತನಾಡಿ,

> "ಈ ಗೌರವ ನನ್ನೊಬ್ಬರದ್ದಲ್ಲ; ಗ್ರಾಮಸ್ಥರು, ಸಹೋದ್ಯೋಗಿಗಳು, ಸ್ನೇಹಿತರು ಹಾಗೂ ಕುಟುಂಬದವರ ಬೆಂಬಲದ ಫಲ ಇದು. ಜನರ ನೋವಿಗೆ ಸ್ಪಂದಿಸುವ ಆಡಳಿತವೇ ನಿಜವಾದ ಸೇವೆ. ಈ ಸನ್ಮಾನ ಇನ್ನಷ್ಟು ಜನಪರ ಸೇವೆ ಮಾಡಲು ಹೊಸ ಪ್ರೇರಣೆ ನೀಡಿದೆ."
> – ಅಮೀರ ನಾಯಕ, ಪಿಡಿಒ

"ಗ್ರಾಮೀಣ ಭಾರತದ ನಿಜವಾದ ಶಕ್ತಿ ಜನಪರ ಅಧಿಕಾರಿಗಳಲ್ಲಿದೆ. ಅಮೀರ ನಾಯಕರಿಗೆ ದೊರೆತಿರುವ ಗೌರವ ಡಾಕ್ಟರೇಟ್ ಗ್ರಾಮೀಣ ಸೇವಾ ಕ್ಷೇತ್ರಕ್ಕೇ ಸಂದ ಗೌರವ," ಎಂದು ಹೇಳಿದರು.

ಸಮಾರಂಭದಲ್ಲಿ ಹಿರಿಯ ಸಾಹಿತಿ ಎ.ಎಸ್. ಮಕಾನದಾರ, ರಾಜ್ಯ ಸಂಘದ ಜಂಟಿ ಕಾರ್ಯದರ್ಶಿ ರಾಜು ಕಂಟಿಗೊಣ್ಣವರ, ರಾಜ್ಯ ಸಂಘದ ಕ್ರೀಡಾ ಕಾರ್ಯದರ್ಶಿ ಐ.ಎ. ಗಾಡಗೋಳಿ, ಜಿಲ್ಲಾ ಸಂಘದ ಕಾರ್ಯದರ್ಶಿ ಎಂ.ವೈ. ಮಲಕಶೆಟ್ಟಿ, ಸಮಾಜ ಸೇವಕ ಕರೀಮಸಾಬ ಸುಣಗಾರ, ಎಸ್.ಎಸ್. ಪಾರ್ವತಿಮಠ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಅಮೀರ ನಾಯಕರ ಸಾಧನೆಗೆ ಗದಗ ಜಿಲ್ಲೆಯ ವಿವಿಧ ಸಂಘ-ಸಂಸ್ಥೆಗಳು, ಸಾಹಿತ್ಯ ವಲಯದ ಗಣ್ಯರು ಹಾಗೂ ಸಾರ್ವಜನಿಕರಿಂದ ಅಭಿನಂದನೆಗಳ ಮಹಾಪೂರ ಹರಿದು ಬಂದಿದೆ.

## ಜ್ಯೋತಿ ಭೋವಿ ಅವರಿಗೆ ಪಿಎಚ್.ಡಿ ಪದವಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಕರ್ನಾಟಕ ವಿಶ್ವವಿದ್ಯಾಲಯ ಭೌತಶಾಸ್ತ್ರ ವಿಭಾಗದ ಸಂಶೋಧನಾ ಅಭ್ಯರ್ಥಿ ಶ್ರೀಮತಿ ಜ್ಯೋತಿ ಭೋವಿ ಅವರಿಗೆ ಡಾಕ್ಟರ್ ಆಫ್ ಫಿಲಾಸಫಿ (ಪಿಎಚ್.ಡಿ) ಪದವಿ ಲಭಿಸಿದೆ. ಇತ್ತೀಚೆಗೆ ನಡೆದ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಥಾವರ್ ಚಂದ್ ಗೆಹ್ಲೋಟ್ ಅವರು ಕುಲಪತಿಗಳು ಹಾಗೂ ಕುಲಸಚಿವರ ಸಮ್ಮುಖದಲ್ಲಿ ಈ ಪ್ರತಿಷ್ಠಿತ ಪದವಿಯನ್ನು ಪ್ರದಾನ ಮಾಡಿದರು.

ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅಡಿಯಲ್ಲಿ ಭೌತಶಾಸ್ತ್ರದ ಸಂಕೀರ್ಣ ವಿಷಯದ ಮೇಲೆ ಜ್ಯೋತಿ ಭೋವಿ ಅವರು ನಡೆಸಿದ ಸಂಶೋಧನೆಗೆ ಈ ಗೌರವ ಲಭಿಸಿದೆ. ಹಿರಿಯ ಪ್ರಾಧ್ಯಾಪಕರಾದ ಡಾ. ಜಯಶ್ರೀ ಜೆ. ಟೋಣಣ್ಣವರ ಅವರ ಮಾರ್ಗದರ್ಶನದಲ್ಲಿ “Study of Modeling, Structuralization and Spectroscopy of Some Molecular Systems” ಎಂಬ ಮಹಾಪ್ರಬಂಧವನ್ನು ಯಶಸ್ವಿಯಾಗಿ ಮಂಡಿಸಿದ್ದರು. ಅಭ್ಯರ್ಥಿಯ ಈ ಶೈಕ್ಷಣಿಕ ಸಾಧನೆಯನ್ನು ವಿಶ್ವವಿದ್ಯಾಲಯದ ಸಿಂಡಿಕೇಟ್ ಶ್ಲಾಘಿಸಿದ್ದು, ಕುಟುಂಬಸ್ಥರು, ಬಂಧು-ಮಿತ್ರರು ಹಾಗೂ ಶಿಕ್ಷಣ ವಲಯದ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

## ಡಿಪ್ಲೋಮಾ ಪ್ರವೇಶಕ್ಕೆ ಮತ್ತೊಂದು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸಂಸ್ಥೆಯಲ್ಲಿ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸುವ ಅವಧಿಯನ್ನು ವಿಸ್ತರಿಸಲಾಗಿದೆ. ಗದಗ ಜಿಲ್ಲೆಯ ನರಸಾಪೂರ, ಬೆಟಗೇರಿ ಭಾಗದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಉಳಿದಿರುವ ಡಿಪ್ಲೋಮಾ ಕೋರ್ಸುಗಳ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಮೆರಿಟ್ ಹಾಗೂ ರೋಸ್ಟರ್ ಆಧಾರದ ಮೇರೆಗೆ ಪ್ರವೇಶ ನೀಡಲಾಗುತ್ತಿದೆ.

ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಮೇ 30ರವರೆಗೆ ವಿಸ್ತರಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಕಾಲೇಜಿನ ಕಚೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

### ಹೊಸ ದಾಖಲಾತಿಗೆ ₹1000 ಠೇವಣಿ, ಉಚಿತ ಬ್ಯಾಗ್-ಟೈ; ಬೆಳ್ಳಟ್ಟಿ ಶಾಲೆಯ ವಿನೂತನ ಪ್ರಯೋಗಕ್ಕೆ ಮೆಚ್ಚುಗೆ

# ಖಾಸಗಿ ಶಾಲೆಗಳಿಗೆ ಸರ್ಕಾರಿ ಶಾಲೆಯ ಟಕ್ಕರ್!

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಖಾಸಗಿ ಶಾಲೆಗಳ ಪೈಪೋಟಿಯ ನಡುವೆಯೂ ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚಿಸಲು ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಹೊಸ ಬಡಾವಣೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ವಿನೂತನ ಹೆಜ್ಜೆ ಇಟ್ಟಿದ್ದು, ಹೊಸದಾಗಿ ದಾಖಲಾಗುವ ಪ್ರತಿಯೊಬ್ಬ ವಿದ್ಯಾರ್ಥಿಯ ಹೆಸರಿನಲ್ಲಿ ₹1000 ಠೇವಣಿ ಇಡುವ ಘೋಷಣೆ ಮಾಡಿದೆ.

ಈ ವಿಶಿಷ್ಟ ಪ್ರಯತ್ನ ಇದೀಗ ಸಾರ್ವಜನಿಕ ವಲಯದಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದ್ದು, ಸರ್ಕಾರಿ ಶಾಲೆಗಳ ಮೇಲಿನ ವಿಶ್ವಾಸ ಹೆಚ್ಚಿಸುವ ಕೆಲಸ ಮಾಡುತ್ತಿದೆ.

**1ರಿಂದ 5ನೇ ತರಗತಿ ಮಕ್ಕಳಿಗೆ ವಿಶೇಷ ಸೌಲಭ್ಯ**

> “ಶಾಲೆಯಲ್ಲಿ ಹೊಸದಾಗಿ ದಾಖಲಾಗುವ ವಿದ್ಯಾರ್ಥಿಗಳಿಗೆ ₹1000 ಠೇವಣಿ ಹಾಗೂ ಉಚಿತ ಶೈಕ್ಷಣಿಕ ಸಾಮಗ್ರಿ ನೀಡುತ್ತಿರುವುದು ಶಿಕ್ಷಣ ಮತ್ತು ದಾಖಲಾತಿ ಹೆಚ್ಚಿಸಲು ಮಾದರಿಯಾದ ಕಾರ್ಯಕ್ರಮ. ಸರ್ಕಾರಿ ಶಾಲೆಗಳ ಉಳಿವಿಗೆ ಶಿಕ್ಷಕರ ಇಚ್ಛಾಶಕ್ತಿ ಮತ್ತು ಸಮುದಾಯದ ಸಹಕಾರವೇ ದೊಡ್ಡ ಬಲ.”
> – **ಆರ್.ಎಸ್. ಬುರಡಿ,** ಉಪನಿರ್ದೇಶಕರು



ಪ್ರಸ್ತುತ ಶೈಕ್ಷಣಿಕ ವರ್ಷದಿಂದ ಶಾಲೆಗೆ 1ರಿಂದ 5ನೇ ತರಗತಿಯವರೆಗೆ ದಾಖಲಾಗುವ ಪ್ರತಿಯೊಂದು ವಿದ್ಯಾರ್ಥಿಯ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ₹1000 ಠೇವಣಿ ಇಡಲಾಗುತ್ತಿದೆ. ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ 10ನೇ ತರಗತಿ ಹಾಗೂ ಪಿಯುಸಿ ಶಿಕ್ಷಣಕ್ಕೆ ಇದು ಸಹಕಾರಿಯಾಗಲಿದೆ ಎಂಬುದು ಶಿಕ್ಷಕರ ಅಭಿಪ್ರಾಯವಾಗಿದೆ.

ಇದರ ಜೊತೆಗೆ ಉಚಿತ ಶಾಲಾ ಬ್ಯಾಗ್, ಟೈ-ಬೆಲ್ಟ್, ಶಾಲೆಯ ಹೆಸರುಳ್ಳ ಟೀ-ಶರ್ಟ್ ಹಾಗೂ ಮಗ್ಗಿ ಪುಸ್ತಕಗಳನ್ನು ಸಹ ನೀಡಲು ಶಾಲೆ ಮುಂದಾಗಿದೆ.

ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯಾದರೂ ಇಲ್ಲಿ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ ಮಾಡಲಾಗಿದ್ದು, ಟಿವಿ ಹಾಗೂ ಯೂಟ್ಯೂಬ್ ಆಧಾರಿತ ವಿಡಿಯೋ ಪಾಠಗಳ ಮೂಲಕ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ.

> “ಗ್ರಾಮದ ಸಮುದಾಯ ಮತ್ತು ಶಿಕ್ಷಕರ ಸಹಕಾರದಿಂದ ಮಕ್ಕಳನ್ನು ಸರ್ಕಾರಿ ಶಾಲೆಯತ್ತ ಆಕರ್ಷಿಸಲು ಈ ಯೋಜನೆ ರೂಪಿಸಲಾಗಿದೆ. ಹೊಸದಾಗಿ ದಾಖಲಾಗುವ ವಿದ್ಯಾರ್ಥಿಗಳಿಗೆ ₹1000 ಠೇವಣಿ, ಶಾಲಾ ಬ್ಯಾಗ್, ಟೈ-ಬೆಲ್ಟ್, ಟೀ-ಶರ್ಟ್ ಹಾಗೂ ಮಗ್ಗಿ ಪುಸ್ತಕಗಳನ್ನು ಉಚಿತವಾಗಿ ನೀಡಲಾಗುತ್ತದೆ.”
> – **ಗಿರೀಶ ಕೊಡಬಾಳ,** ಮುಖ್ಯೋಪಾಧ್ಯಾಯರು

ಶುದ್ಧ ಕುಡಿಯುವ ನೀರು, ಶೌಚಾಲಯ ಹಾಗೂ ಎಲ್ಲ ತರಗತಿಗಳಲ್ಲೂ ಫ್ಯಾನ್ ವ್ಯವಸ್ಥೆ ಇರುವುದರಿಂದ ಶಾಲೆ ಮಕ್ಕಳಿಗೆ ಆಕರ್ಷಕ ಶಿಕ್ಷಣ ವಾತಾವರಣ ಒದಗಿಸಿದೆ.

ಸರ್ಕಾರದಿಂದ ಪಠ್ಯಪುಸ್ತಕ, ಸಮವಸ್ತ್ರ, ಶೂ-ಸಾಕ್ಸ್, ಬಿಸಿಯೂಟ ಸೇರಿದಂತೆ ಅನೇಕ ಸೌಲಭ್ಯಗಳು ದೊರೆಯುತ್ತಿದ್ದರೂ ಹಲವು ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ವರ್ಷದಿಂದ ವರ್ಷಕ್ಕೆ ಕುಸಿಯುತ್ತಿದೆ.

ಆದರೆ ಬೆಳ್ಳಟ್ಟಿ ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರು ಸಮುದಾಯದ ಸಹಕಾರದೊಂದಿಗೆ ಮಕ್ಕಳ ದಾಖಲಾತಿ ಹೆಚ್ಚಿಸಲು ಹೊಸ ಪ್ರಯತ್ನ ಕೈಗೊಂಡಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

## ವರ್ಗಾವಣೆಗೊಂಡ ಪತ್ರಕರ್ತ ಸತೀಶ ಬೆಳ್ಳಕ್ಕಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ



ಕಳೆದ ಆರು ವರ್ಷಗಳಿಂದ ಪ್ರಜಾವಾಣಿ ಪತ್ರಿಕೆಯ ಗದಗ ಜಿಲ್ಲಾ ವರದಿಗಾರರಾಗಿ ಸೇವೆ ಸಲ್ಲಿಸಿದ್ದ ಕೆ.ಎಂ. ಸತೀಶ ಬೆಳ್ಳಕ್ಕಿ ಅವರು ಪತ್ರಕರ್ತರಿಗೆ ಮಾದರಿಯಾಗಿದ್ದಾರೆ ಎಂದು ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅಭಿಪ್ರಾಯಪಟ್ಟರು.

ತುಮಕೂರು ಜಿಲ್ಲೆಗೆ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ನಗರದ ಪತ್ರಿಕಾ ಭವನದಲ್ಲಿ ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಹಾಗೂ ಸನ್ಮಾನ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

“ಪತ್ರಕರ್ತರಿಗೆ ವೃತ್ತಿಬದ್ಧತೆ, ಭಾಷಾ ಜ್ಞಾನ ಹಾಗೂ ಓದು ಅತ್ಯಂತ ಮುಖ್ಯ. ಸತೀಶ ಬೆಳ್ಳಕ್ಕಿ ಅವರು ಮಿತಭಾಷಿಯಾಗಿದ್ದರೂ, ಅವರ ಬರಹಗಳು ಸಮಾಜದ ಅನೇಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿವೆ. ಮುಂದಿನ ದಿನಗಳಲ್ಲಿ ಅವರು ಮಾಧ್ಯಮ ಕ್ಷೇತ್ರದಲ್ಲಿ ಇನ್ನಷ್ಟು ಉನ್ನತ ಸ್ಥಾನಕ್ಕೇರಲಿ” ಎಂದು ಹಾರೈಸಿದರು.

ಸತೀಶ ಬೆಳ್ಳಕ್ಕಿ ಅವರೊಂದಿಗೆ ಕಳೆದ ದಿನಗಳ ಒಡನಾಟವನ್ನು ಕಾನಿಪ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ವೆಂಕಟೇಶ ಇಮರಾಪೂರ, ರುದ್ರಗೌಡ ಪಾಟೀಲ, ಗಿರೀಶ ಕಮ್ಮಾರ, ಹಿರಿಯ ಪತ್ರಕರ್ತ ಬಸವರಾಜ ದಂಡಿನ, ಶಿವಾನಂದ ಹಿರೇಮಠ, ಶಿವಕುಮಾರ ಕುಷ್ಟಗಿ, ಸಲೀಂ ಬಳಬಟ್ಟಿ, ಸುರೇಶ ಕಡ್ಲಿಮಟ್ಟಿ, ಕಾಶೀನಾಥ ಬಿಳಿಮಗ್ಗದ ಸೇರಿದಂತೆ ಹಲವರು ಸ್ಮರಿಸಿದರು.

ಬಳಿಕ ಸತೀಶ ಬೆಳ್ಳಕ್ಕಿ ದಂಪತಿಗಳನ್ನು ಸಂಘದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಖಜಾಂಚಿ ರಾಮು ವಗ್ಗಿ, ಕಾರ್ಯದರ್ಶಿ ಬನೇಶ ಕುಲಕರ್ಣಿ, ಸಂತೋಷ ಕೊಣ್ಣೂರ, ಮಾಳಿಂಗರಾಯ ಪೂಜಾರ, ನಾಗರಾಜ ಹಣಗಿ, ಚಂದ್ರು ಭಜಂತ್ರಿ, ಚಂದ್ರು ರಾಠೋಡ, ಶ್ರೀಶೈಲ ಕುಂಬಾರ, ನಿಂಗಪ್ಪ ಹಮ್ಮಗಿ, ಛಾಯಾಗ್ರಾಹಕ ಶಂಕರ ಗುರಿಕಾರ, ಮಹಾಂತೇಶ ಹೂಗಾರ, ಲಿಂಗರಾಜ ಎಂ.ಆರ್., ಶರಣು ಮೆಣಸಿನಕಾಯಿ, ದೊಡ್ಡೇಶ, ಪರಶು ಹಳ್ಳದ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳ ಪತ್ರಕರ್ತರು ಭಾಗವಹಿಸಿದ್ದರು.

## ಜನಜಾತಿ ವಿದ್ಯಾರ್ಥಿಗಳಿಗೆ ಜಾಗೃತಿ ಅಭಿಯಾನ



■ವಿಜಯಸಾಕ್ಷಿ ಸುದ್ದಿ, ಗದಗ

ಧರ್ತಿ ಆಭಾ ಜನಜಾತಿಯ ಗ್ರಾಮ ಉತ್ಕರ್ಷ ಅಭಿಯಾನದಡಿ “Jan-Bhagidari Sabse Door, Pehale” ಅಭಿಯಾನ ಕಾರ್ಯಕ್ರಮವನ್ನು ನಗರದ ಸರಕಾರಿ ಮೆಟ್ರಿಕ್ ನಂತರದ ಪರಿಶಿಷ್ಟ ಪಂಗಡದ ಬಾಲಕರ ವಸತಿ ನಿಲಯದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಕಚೇರಿ ಅಧೀಕ್ಷಕರು ಭಾಗವಹಿಸಿ, ಸರ್ಕಾರದ ವಿವಿಧ ಜನಜಾತಿ ಕಲ್ಯಾಣ ಯೋಜನೆಗಳು, ವಿದ್ಯಾರ್ಥಿಗಳ ಸೌಲಭ್ಯಗಳು ಹಾಗೂ ಅಭಿಯಾನದ ಉದ್ದೇಶಗಳ ಕುರಿತು ಮಾಹಿತಿ ನೀಡಿದರು.

ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಮುಖ್ಯವಾಹಿನಿಗೆ ತರಲು ಹಾಗೂ ಸರ್ಕಾರಿ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದರು.

“ಸರ್ಕಾರದ ಕಲ್ಯಾಣ ಯೋಜನೆಗಳ ಸದುಪಯೋಗ ಪಡೆಯಲು ವಿದ್ಯಾರ್ಥಿಗಳು ಜಾಗೃತರಾಗಬೇಕು. ಶಿಕ್ಷಣದ ಮೂಲಕ ಸಮಾಜದಲ್ಲಿ ಉತ್ತಮ ಸ್ಥಾನ ಪಡೆಯಬೇಕು” ಎಂದು ಅಧಿಕಾರಿಗಳು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಿಲಯದ ಮೇಲ್ವಿಚಾರಕರು, ಕಚೇರಿ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲಾಯಿತು.

## ಕಾಯಕಯೋಗಿ ಪ್ರಶಸ್ತಿ ವಿಜೇತ ಪಟ್ಟಣಶೆಟ್ಟರರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ




ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಹಾಗೂ ಶಿಕ್ಷಣ ತಜ್ಞ ಪ್ರೊ. ಶಿವಾನಂದ ಪಟ್ಟಣಶೆಟ್ಟರ ಅವರಿಗೆ “ಕಾಯಕಯೋಗಿ–2026” ರಾಜ್ಯ ಮಟ್ಟದ ಪ್ರಶಸ್ತಿ ಲಭಿಸಿದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನ್ಯಾಸಕರಾದ ಜಿ.ಡಿ. ದಾಸರ ಅವರು ಶಾಲು ಹೊದಿಸಿ ಸನ್ಮಾನಿಸಿದರು.

“ಪ್ರೊ. ಪಟ್ಟಣಶೆಟ್ಟರ ಅವರು ಶಿಕ್ಷಣವನ್ನು ಸಮಾಜ ಪರಿವರ್ತನೆಯ ಸಾಧನವೆಂದು ನಂಬಿದ ಅಪರೂಪದ ಕಾಯಕಯೋಗಿ. ಅವರ ಸೇವಾಭಾವ, ಸರಳತೆ ಹಾಗೂ ಮಾನವೀಯತೆ ಎಲ್ಲರಿಗೂ ಆದರ್ಶ” ಎಂದು ಜಿ.ಡಿ. ದಾಸರ ಹೇಳಿದರು. ಮಕ್ಕಳ ಭವಿಷ್ಯಕ್ಕಾಗಿ ಬೆಳಗ್ಗೆಯಿಂದ ತಡರಾತ್ರಿವರೆಗೆ ಶಾಲೆಯಲ್ಲೇ ಶ್ರಮಿಸುವ ಅವರ ನಿಷ್ಠೆ ಬಸವಣ್ಣನವರ “ಕಾಯಕವೇ ಕೈಲಾಸ” ವಚನವನ್ನು ನೆನಪಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

## ನಿಧನ

### ಚಿದ್ರಿ ಶಾಂತಮ್ಮ



ಹಗರಿಬೊಮ್ಮನಹಳ್ಳಿ: ಪಟ್ಟಣದ ಆರ್ಯವೈಶ್ಯ ಸಮಾಜದ ಹಿರಿಯರಾದ ಚಿದ್ರಿ ಶಾಂತಮ್ಮ (87) ಅವರು ನಿಧನರಾಗಿದ್ದಾರೆ.

ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಸಂಸ್ಕಾರವು ಗುರುವಾರ, ಮೇ 28ರಂದು ಬೆಳಿಗ್ಗೆ 9 ಗಂಟೆಗೆ ಹಗರಿಬೊಮ್ಮನಹಳ್ಳಿ ಪಟ್ಟಣದ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

### ಕುಸುಮಾ ಬೆಳಗಟ್ಟಿ



ಗದಗ: ತಾಲೂಕಿನ ಹುಯಿಲಗೋಳ ಗ್ರಾಮದ ನಿವಾಸಿ, ಗದಗ ತಾಲೂಕು ಪಂಚಾಯತಿ ಮಾಜಿ ಸದಸ್ಯೆ ಹಾಗೂ ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿಯಾಗಿದ್ದ ಶ್ರೀಮತಿ ಕುಸುಮಾ ರಮೇಶ ಬೆಳಗಟ್ಟಿ (54) ಅವರು ಬುಧವಾರ ನಿಧನರಾದರು.

ಮೃತರು ಪತಿ, ಮೂವರು ಪುತ್ರರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅವರ ಅಂತ್ಯಕ್ರಿಯೆ ಗುರುವಾರ (ಮೇ 28) ಬೆಳಿಗ್ಗೆ 9 ಗಂಟೆಗೆ ಸ್ವಗ್ರಾಮ ಹುಯಿಲಗೋಳದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೃತರ ನಿಧನಕ್ಕೆ ರಾಜ್ಯದ ಕಾನೂನು ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಸಚಿವ ಬಿ.ಆರ್. ಯಾವಗಲ್ಲ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ, ಗದಗ ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಅಶೋಕ ಮಂದಾಲಿ, ಗದಗ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ನೀಲಮ್ಮ ಬೋಳನವರ, ಗದಗ ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷೆ ಶ್ರೀಮತಿ ಸುಜಾತಾ ದೊಡ್ಡಮನಿ, ರುದ್ರಮ್ಮ ಕೆರಕಲಮಟ್ಟಿ, ಮೀನಾಕ್ಷಿ ಬೆನಕಣ್ಣವರ ಸೇರಿದಂತೆ ಅನೇಕರು ಸಂತಾಪ ಸೂಚಿಸಿದ್ದಾರೆ.

### ಶಿರಹಟ್ಟಿಯಲ್ಲಿ ಜನಜಾಗೃತಿ ಸಭೆ- ರೈತರು ಹಕ್ಕಿಗಾಗಿ ಜಾಗೃತರಾಗಲು ರವಿಕಾಂತ್ ಅಂಗಡಿ ಕರೆ

# ಬಗರ್ ಹುಕುಂ ಜಮೀನಿಗೆ ಹಕ್ಕುಪತ್ರದ ಭರವಸೆ!

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಅರಣ್ಯ ಭೂಮಿ, ಬಗರ್ ಹುಕುಂ ಹಾಗೂ ಹುಲ್ಲುಗಾವಲು ಜಮೀನುಗಳ ಹಕ್ಕುಪತ್ರ ಪಡೆಯುವ ಕುರಿತು ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ಹಾಗೂ ವಕೀಲ ರವಿಕಾಂತ್ ಅಂಗಡಿ ಅವರು ತಾಲೂಕಿನ ಜಲ್ಲಿಗೇರಿ ಗ್ರಾಮದಲ್ಲಿ ಜನಜಾಗೃತಿ ಸಭೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಅವರು, ಹಲವು ತಲೆಮಾರುಗಳಿಂದ ಉಳುಮೆ ಮಾಡಿಕೊಂಡು ಬಂದಿರುವ ರೈತರಿಗೆ ಜಮೀನುಗಳ ಹಕ್ಕುಪತ್ರ ದೊರಕುವ ನಿರೀಕ್ಷೆ ಹೆಚ್ಚಾಗಿದೆ ಎಂದು ಹೇಳಿದರು.



> “ತಲೆತಲೆಮಾರುಗಳಿಂದ ಉಳುಮೆ ಮಾಡಿಕೊಂಡು ಬಂದಿರುವ ರೈತರಿಗೆ ನ್ಯಾಯ ಸಿಗಬೇಕು. ಬಗರ್ ಹುಕುಂ ಮತ್ತು ಹುಲ್ಲುಗಾವಲು ಜಮೀನುಗಳ ಹಕ್ಕುಪತ್ರಕ್ಕಾಗಿ ನಡೆದ ಹೋರಾಟದ ಫಲವಾಗಿ ಸರ್ಕಾರ ಈಗ ಅರ್ಜಿಗಳ ಪುನರ್ ಪರಿಶೀಲನೆ ಹಾಗೂ ಹೊಸ ಅರ್ಜಿಗಳ ಸ್ವೀಕಾರಕ್ಕೆ ಮುಂದಾಗಿದೆ. ಜನರು ತಮ್ಮ ಹಕ್ಕುಗಳಿಗಾಗಿ ಜಾಗೃತರಾಗಬೇಕು.”
> – **ರವಿಕಾಂತ್ ಅಂಗಡಿ,** ರಾಜ್ಯಾಧ್ಯಕ್ಷರು, ಉತ್ತರ ಕರ್ನಾಟಕ ಮಹಾಸಭಾ

ಉತ್ತರ ಕರ್ನಾಟಕ ಮಹಾಸಭಾ ನಡೆಸಿದ ನಿರಂತರ ಹೋರಾಟದ ಪರಿಣಾಮವಾಗಿ ಸರ್ಕಾರ ಈಗ ಹಳೆಯ ಅರ್ಜಿಗಳ ಪುನರ್ ಪರಿಶೀಲನೆ ಜೊತೆಗೆ ಹೊಸ ಅರ್ಜಿಗಳನ್ನೂ ಸ್ವೀಕರಿಸಲು ಮುಂದಾಗಿದೆ ಎಂದು ತಿಳಿಸಿದರು.

ಈ ಹಿನ್ನೆಲೆಯಲ್ಲಿ ತಾಲೂಕು ಹಾಗೂ ಜಿಲ್ಲಾಡಳಿತದ ವತಿಯಿಂದ ಪಿಡಿಓಗಳು ಮತ್ತು ಅರಣ್ಯ ಇಲಾಖೆ ಅಧಿಕಾರಿಗಳಿಗೆ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದ್ದು, ಹಕ್ಕು ಪತ್ರ ವಿತರಣೆ ಪ್ರಕ್ರಿಯೆ ವೇಗಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ರೈತರು ತಮ್ಮ ಹಕ್ಕುಗಳ ಬಗ್ಗೆ ಜಾಗೃತರಾಗಿದ್ದು, ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಪರಶುರಾಮ ಕಟಗಿ, ಶಂಕ್ರಯ್ಯ ಫಕೀರಯ್ಯ ಹಿರೇಮಠ, ಮಂಜುನಾಥ ಕೆಲೂರ, ಈರಣ್ಣ ಚವ್ಹಾಣ, ನಿಂಗಪ್ಪ ಕಡಪಟ್ಟಿ, ಶೇಖಪ್ಪ ಲಮಾಣಿ, ಈರಪ್ಪ ಹುಬ್ಬಳ್ಳಿ, ಗೌಸ್‌ಮಾದ್ದೀನ್ ಬಸ್ತಿ, ಮಂಜು ಅರಪಲ್ಲಿ, ನಾಮದೇವ ಮಾಂಡ್ರೆ ಸೇರಿದಂತೆ ಗ್ರಾಮಸ್ಥರು, ರೈತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

# ಬಿತ್ತನೆ ಬೀಜ ವಿತರಣೆಗೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಸರ್ಕಾರದ ರಿಯಾಯಿತಿ ದರದ ಬಿತ್ತನೆ ಬೀಜ ವಿತರಣೆಗೆ ಮುಳಗುಂದ ಕೃಷಿ ಕೇಂದ್ರದಲ್ಲಿ ಚಾಲನೆ ನೀಡಲಾಯಿತು. ಹುಲಕೋಟಿ ಕೃಷಿ ಸಹಾಯಕ ಅಧಿಕಾರಿ ಎಫ್.ಎಸ್. ಗುರಿಕಾರ ರೈತರಿಗೆ ಬಿತ್ತನೆ ಬೀಜ ವಿತರಿಸಿ ಮಾತನಾಡಿದರು.

“ಜೂನ್ ತಿಂಗಳ ಮೊದಲ ವಾರ ಮುಂಗಾರು ಬಿತ್ತನೆ ಆರಂಭಿಸಲು ಸೂಕ್ತ ಸಮಯವಾಗಿದೆ. ರೈತರು ಭೂಮಿಯ ತೇವಾಂಶ ಪರಿಶೀಲಿಸಿ ಬಿತ್ತನೆ ಕೈಗೊಳ್ಳಬೇಕು. ಈಗಾಗಲೇ ಹೆಸರು ಹಾಗೂ ತೊಗರಿ ಬೀಜಗಳು ಲಭ್ಯವಿದ್ದು, ಗೋವಿನ ಜೋಳ ಬೀಜಗಳ ಸರಬರಾಜಿಗೂ ಕ್ರಮ ಕೈಗೊಳ್ಳಲಾಗಿದೆ” ಎಂದು ಅವರು ತಿಳಿಸಿದರು.

ರೈತರು ಮಣ್ಣಿನ ತೇವಾಂಶಕ್ಕೆ ಅನುಗುಣವಾಗಿ ಬಿತ್ತನೆ ಮಾಡಿದರೆ ಉತ್ತಮ ಬೆಳೆ ಪಡೆಯಲು ಸಾಧ್ಯವಾಗುತ್ತದೆ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕಾಶಿಮಸಾಬ ಹಾದಿಮನಿ, ರೈತ ಸಂಘದ ಅಧ್ಯಕ್ಷ ದೇವಪ್ಪ ಅಣ್ಣಿಗೇರಿ, ದೇವರಾಜ ಸಂಗನಪೇಟಿ, ಕಿರಣ ಕುಲಕರ್ಣಿ, ಮಹಾಂತೇಶ ಗುಂಜಳ, ಪ್ರಭಪ್ಪ ಲದ್ದಿ, ಮಹಮ್ಮದಲಿ ಶೇಖ, ಶಂಕ್ರಯ್ಯ ಹಿರೇಮಠ, ಮಂಜುನಾಥ ಕಬಾಡೆ, ಮಹಾಂತೇಶ ಲಾಳಿ, ಮುತ್ತಪ್ಪ ಬಳ್ಳಾರಿ ಹಾಗೂ ಚನ್ನಬಸಪ್ಪ ಕಣವಿ ಉಪಸ್ಥಿತರಿದ್ದರು.

## ಮೇ 30ರಂದು ಗದಗನಲ್ಲಿ ವಚನ ಅರಿವಿನ ಮಹಾಯಾನ

■ವಿಜಯಸಾಕ್ಷಿ ಸುದ್ದಿ, ಗದಗ

"ಸಮಾನತೆಗಾಗಿ ನಾವು" ವೇದಿಕೆಯ ವತಿಯಿಂದ ಮೇ 30ರಂದು ಬೆಳಿಗ್ಗೆ 11 ಗಂಟೆಗೆ ನಗರದ ಗಾಂಧಿ ವೃತ್ತದಲ್ಲಿ "ವಚನ ಅರಿವಿನ ಮಹಾಯಾನ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಬಸವಾದಿ ಶರಣರ ವಚನಗಳ ಸಾಮೂಹಿಕ ಪಠಣ, ಸಂವಿಧಾನದ ಪೂರ್ವಪೀಠಿಕೆಯ ಸಮಾನತೆಯ ಉದ್ಘೋಷ ಹಾಗೂ ಗಾಯನ ಕಾರ್ಯಕ್ರಮಗಳು ನಡೆಯಲಿವೆ.

12ನೇ ಶತಮಾನದಲ್ಲಿ ಬಸವಾದಿ ಶರಣರು ವಚನಗಳ ಮೂಲಕ ಸಮಾಜಕ್ಕೆ ಸಮಾನತೆ, ಸಹೋದರತ್ವ ಹಾಗೂ ಮಾನವೀಯತೆಯ ಸಂದೇಶ ಸಾರಿದ್ದರು. ನಂತರ ಬುದ್ಧನು ತನ್ನ ಅಷ್ಟಾಂಗ ಮಾರ್ಗ ಮತ್ತು ತ್ರಿಪಿಟಕಗಳ ಮೂಲಕ ಇದೇ ಆಶಯವನ್ನು ಮುಂದುವರೆಸಿದ್ದಾನೆ. ಸ್ವಾತಂತ್ರ್ಯಾನಂತರ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಈ ಚಿಂತನೆಗಳನ್ನು ಕಾನೂನಿನ ರೂಪದಲ್ಲಿ ಜಾರಿಗೆ ತಂದರು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಪ್ರಸ್ತುತ ರಾಜ್ಯದಲ್ಲಿ ಸಮಾನತೆ ಮತ್ತು ಸಹೋದರತ್ವ ಸಾರುವ ವಚನಗಳ ಅರ್ಥವನ್ನು ತಿರುಚುವ ಪ್ರಯತ್ನಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ, ವಚನಗಳ ನಿಜವಾದ ಆಶಯವನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವೇದಿಕೆ ತಿಳಿಸಿದೆ.

"ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ವಚನ ಪಠಣ ಹಾಗೂ ಗಾಯನದ ಮೂಲಕ ಜನರ ಮುಂದಿಡುವ ಕಾರ್ಯ ನಡೆಯಲಿದೆ" ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಾರ್ಯಕ್ರಮದಲ್ಲಿ ಬಸವಾನುಯಾಯಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ವೇದಿಕೆ ಮನವಿ ಮಾಡಿದೆ.

**ಮುಂಗಾರು ಹಂಗಾಮಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಣೆಗೆ ಶಾಸಕ ಕೆ. ನೇಮಿರಾಜ ನಾಯ್ಕ ಚಾಲನೆ**

# ರೈತರ ಹಿತವೇ ಸರ್ಕಾರದ ಮೊದಲ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದಲ್ಲಿ ಕೃಷಿ ಇಲಾಖೆ ವತಿಯಿಂದ ಆಯೋಜಿಸಿದ್ದ 2026-27ನೇ ಸಾಲಿನ ಮುಂಗಾರು ಹಂಗಾಮಿನ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣಾ ಕಾರ್ಯಕ್ರಮಕ್ಕೆ ಶಾಸಕ ಕೆ. ನೇಮಿರಾಜ ನಾಯ್ಕ ಚಾಲನೆ ನೀಡಿದರು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರ ಹಿತಾಸಕ್ತಿ ಕಾಪಾಡುವುದು ಸರ್ಕಾರದ ಮೊದಲ ಆದ್ಯತೆಯಾಗಿದ್ದು, ಕೃಷಿಯಲ್ಲಿ ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆ ಮಣ್ಣಿನ ಫಲವತ್ತತೆಯನ್ನು ಹಾಳುಮಾಡುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು. ರೈತರು ಕೊಟ್ಟಿಗೆ ಗೊಬ್ಬರ ಸೇರಿದಂತೆ ಸಾವಯವ ಪದ್ಧತಿಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಇಂದಿನ ಜಾಗತಿಕ ಯುದ್ಧ ಪರಿಸ್ಥಿತಿಯಲ್ಲಿ ರಾಸಾಯನಿಕ ಗೊಬ್ಬರಗಳ ಲಭ್ಯತೆ ವ್ಯತ್ಯಯವಾಗುವ ಸಾಧ್ಯತೆ ಇದೆ. ಇಂತಹ ಸಂದರ್ಭದಲ್ಲಿ ರೈತರು ನ್ಯಾನೋ ಯೂರಿಯಾ ಹಾಗೂ ಲಿಕ್ವಿಡ್ ಡಿಎಪಿ ಸಿಂಪಡಣೆ ಮೂಲಕ ಬೆಳೆಗಳನ್ನು ರಕ್ಷಿಸಿಕೊಳ್ಳಬೇಕು ಎಂದು ತಿಳಿಸಿದರು.

ತಾಲೂಕಿನ ಹಂಪಸಾಗರ, ತಂಬ್ರಹಳ್ಳಿ, ಕೋಗಳಿ, ಹಗರಿಬೊಮ್ಮನಹಳ್ಳಿ ಹಾಗೂ ಎಪಿಎಂಸಿ ಆವರಣದಲ್ಲಿ ಒಟ್ಟು ಐದು ಬಿತ್ತನೆ ಬೀಜ ವಿತರಣಾ ಕೇಂದ್ರಗಳನ್ನು ತೆರೆಯಲಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎಸ್.ಬಿ. ಪಾಟೀಲ್ ಮಾತನಾಡಿ, ರೈತರಿಗೆ ಅಗತ್ಯವಿರುವ 270 ಕ್ವಿಂಟಲ್ ಬಿತ್ತನೆ ಬೀಜ ಸಂಗ್ರಹವಿದ್ದು, ಪಹಣಿ ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯನ್ನು ನೀಡಿ ಬೀಜ ಖರೀದಿಸಬಹುದು ಎಂದು ತಿಳಿಸಿದರು. 2, 3, 4 ಮತ್ತು 5 ಕೆಜಿ ಪ್ಯಾಕೆಟ್‌ಗಳಲ್ಲಿ ಬಿತ್ತನೆ ಬೀಜ ಲಭ್ಯವಿದ್ದು, ಎಫ್‌ಐಡಿ ನಿಯಮಾನುಸಾರ ಎಸ್‌ಸಿ ಮತ್ತು ಎಸ್‌ಟಿ ವರ್ಗದ ರೈತರಿಗೆ ರೂ.30 ಹಾಗೂ ಸಾಮಾನ್ಯ ವರ್ಗದ ರೈತರಿಗೆ ರೂ.20 ಸಬ್ಸಿಡಿ ನೀಡಲಾಗುವುದು ಎಂದರು. ರೈತರಿಗೆ

> "ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಂಠಿತವಾಗುತ್ತಿದೆ. ರೈತರು ಸಾವಯವ ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕು."
> – ಕೆ. ನೇಮಿರಾಜ ನಾಯ್ಕ, ಶಾಸಕ

ಯಾವುದೇ ರೀತಿಯ ಬಿತ್ತನೆ ಬೀಜ ಕೊರತೆ ಉಂಟಾಗದಂತೆ ಸಾಕಷ್ಟು ಪ್ರಮಾಣದಲ್ಲಿ ಬೀಜ ವಿತರಣೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಹನಸಿ ದೇವರಾಜ್, ಜೆಡಿಎಸ್ ತಾಲೂಕು ಅಧ್ಯಕ್ಷ ವೈ. ಮಲ್ಲಿಕಾರ್ಜುನ್, ಸಿನಿಮಾ ಮಂಜಣ್ಣ, ಜಿಲ್ಲಾ ಉಪಾಧ್ಯಕ್ಷ ಕೃಷ್ಣಮೂರ್ತಿ ಶೆಟ್ರು, ಕಾರ್ಯದರ್ಶಿ ಪಾಂಡುರಂಗ ನಾಯ್ಕ, ಮುಖಂಡರಾದ ಕೋಗಳಿ ಹನುಮಂತಪ್ಪ, ವಿಶ್ವಕರ್ಮ ಸಮಾಜದ ಅಧ್ಯಕ್ಷ ಸಿದ್ದರಾಜು, ಕೃಷಿ ಇಲಾಖೆಯ ಅಧಿಕಾರಿಗಳಾದ ಭೋಜ ನಾಯ್ಕ, ನಾಗಾರ್ಜುನ, ಶಶಿಕುಮಾರ್, ಶಿವಮೂರ್ತಿ ಸೇರಿದಂತೆ ರೈತರು ಹಾಗೂ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಾ. ಬಾಬು ಜಗಜೀವನ್ ರಾಮ್ ವೃತ್ತ ಲೋಕಾರ್ಪಣೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಡಾ. ಬಾಬು ಜಗಜೀವನ್ ರಾಮ್ ಅವರು ಶೋಷಿತ ಸಮುದಾಯದ ಧ್ವನಿಯಾಗಿ ದೇಶದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಆದರ್ಶಗಳು ಯುವಜನತೆಗೆ ಪ್ರೇರಣೆಯಾಗಬೇಕು" ಎಂದು ವಿಜಯನಗರ ಜಿಲ್ಲಾ ಹಾಗೂ ಹಗರಿಬೊಮ್ಮನಹಳ್ಳಿ ತಾಲೂಕು ಡಾ. ಬಾಬು ಜಗಜೀವನ್ ರಾಮ್ ಸಂಘದ ಅಧ್ಯಕ್ಷ ಹೆಚ್. ಪ್ರಭಾಕರ್ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆ ಮುಂಭಾಗದ ಹೊಸಪೇಟೆ ರಸ್ತೆಯಲ್ಲಿ ಮಂಗಳವಾರ ನಡೆದ ಡಾ. ಬಾಬು ಜಗಜೀವನ್ ರಾಮ್ ವೃತ್ತ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿವಿಧ ದಲಿತಪರ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ದಲಿತ ಸಂಘರ್ಷ ಸಮಿತಿ ತಾಲೂಕು ಅಧ್ಯಕ್ಷ ಹೆಗ್ಡಾಳ್ ಪರಶುರಾಮ್ ಮಾತನಾಡಿ, "ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಪರ ಹೋರಾಡಿದ ಮಹಾನ್ ನಾಯಕರ ಹೆಸರನ್ನು ವೃತ್ತಕ್ಕೆ ನಾಮಕರಣ ಮಾಡಿರುವುದು ಹೆಮ್ಮೆಯ ಸಂಗತಿ" ಎಂದರು.

ಈ ಸಂದರ್ಭದಲ್ಲಿ ಯಡ್ರಮ್ಮಹಳ್ಳಿ ಮರಿಯಪ್ಪ, ರಾಮೇಶ್ ಪೂಜಾರಿ, ನಾಗರಾಜ್ ಕಲ್ಲಹಳ್ಳಿ, ವಕೀಲ ನವೀನ್ ಮಹೇಂದ್ರ, ದುರುಗಪ್ಪ ಕಿತ್ತೂರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಸಮಾನತೆಯ ಬೆಳಕು ಡಾ. ಬಿ.ಆರ್. ಅಂಬೇಡ್ಕರ್' ಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಸಾಹಿತಿ ಎ.ಎಸ್. ಮಕಾನದಾರ**

# ಪ್ರತಿ ಮನುಷ್ಯನಲ್ಲಿ ಗಾಂಧೀಜಿ-ಅಂಬೇಡ್ಕರ್ ಪ್ರಜ್ಞೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಜಾಗತೀಕರಣದ ಕರಿನೆರಳಿನ ಇಂದಿನ ದಿನಮಾನದಲ್ಲಿ ಪ್ರತಿಯೊಬ್ಬ ಮನುಷ್ಯನಲ್ಲೂ ಗಾಂಧೀಜಿ ಪ್ರಜ್ಞೆ ಮತ್ತು ಅಂಬೇಡ್ಕರ್ ಪ್ರಜ್ಞೆ ಮೈಗೂಡಿಸಿಕೊಳ್ಳುವ ಅವಶ್ಯಕತೆ ಇದೆ ಎಂದು ಹಿರಿಯ ಸಾಹಿತಿ, ಕನ್ನಡ ಪುಸ್ತಕ ಪ್ರಾಧಿಕಾರದ ಜಿಲ್ಲಾ ಗ್ರಂಥಾಲಯ ಅನುಷ್ಠಾನ ಸಮಿತಿಯ ಸಂಚಾಲಕ, ಪ್ರಕಾಶಕ ಎ.ಎಸ್. ಮಕಾನದಾರ ಅಭಿಪ್ರಾಯಪಟ್ಟರು.

ಕರ್ನಾಟಕ ರಾಜ್ಯ ಸರ್ಕಾರಿ, ಅರೆ ಸರ್ಕಾರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನೌಕರರ ಸಂಘದ ರಾಜ್ಯ ಸಮಾವೇಶದ ಪೂರ್ವಭಾವಿ ಸಿದ್ಧತಾ ಸಭೆ ಹಾಗೂ ಕಾರ್ಯಾಗಾರ ಅಂಗವಾಗಿ ಬೆಂಗಳೂರಿನ ಬಿ.ಬಿ.ಎಂ.ಪಿ ಮುಖ್ಯ ಕಚೇರಿಯ ಡಾ. ರಾಜ್‌ಕುಮಾರ್ ಗಾಜಿನ ಮನೆ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನ್ಯಾಯಾಂಗ ಇಲಾಖೆಯ ಸಹೋದ್ಯೋಗಿ ಶಫಿವುಲ್ಲ ರಚಿಸಿದ "ಸಮಾನತೆಯ ಬೆಳಕು ಡಾ. ಬಿ.ಆರ್. ಅಂಬೇಡ್ಕರ್" ಕೃತಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.



ರಾಜ್ಯದ 240 ತಾಲೂಕು ಘಟಕಗಳು ಹಾಗೂ 32 ಜಿಲ್ಲಾ ಘಟಕಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ, ವಿವಿಧ ಇಲಾಖೆಗಳ ಸರ್ಕಾರಿ ಮತ್ತು ಅರೆ ಸರ್ಕಾರಿ ನೌಕರರು ಸೇವಾ ಅವಧಿಯಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಚರ್ಚಿಸಿದರು. ಉನ್ನತ ಅಧಿಕಾರಿಗಳು, ಸಾರ್ವಜನಿಕರು ಹಾಗೂ ರಾಜಕೀಯ ವ್ಯಕ್ತಿಗಳಿಂದ ನಡೆಯುತ್ತಿರುವ ಅನ್ಯಾಯ, ದಬ್ಬಾಳಿಕೆ, ದೌರ್ಜನ್ಯ ಮತ್ತು ಶೋಷಣೆಯನ್ನು ತಡೆಗಟ್ಟಲು ಸರ್ಕಾರದ ಗಮನ ಸೆಳೆಯುವ ಕುರಿತು ಸಭೆಯಲ್ಲಿ ಒತ್ತಾಯಿಸಲಾಯಿತು.

2026ನೇ ಸಾಲಿನ ಸದಸ್ಯತ್ವ ನೋಂದಣಿಯನ್ನು ರಾಜ್ಯದ ಎಲ್ಲಾ 84

> "ಅನ್ಯಾಯ, ದಬ್ಬಾಳಿಕೆ ಮತ್ತು ಶೋಷಣೆಯನ್ನು ತಡೆಗಟ್ಟಲು ಸಂಘಟಿತ ಹೋರಾಟ ಅಗತ್ಯ. ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಆಶಯಗಳು ಬಲವಾಗಬೇಕು."
> – ಎ.ಎಸ್. ಮಕಾನದಾರ, ಸಾಹಿತಿ

ಇಲಾಖೆಗಳ ಸರ್ಕಾರಿ ಹಾಗೂ ಅರೆ ಸರ್ಕಾರಿ ನೌಕರರು ಮಾಡಿಕೊಳ್ಳುವಂತೆ ಜಾಗೃತಿ ಮೂಡಿಸುವ ನಿರ್ಧಾರ ಕೈಗೊಳ್ಳಲಾಯಿತು. ಬೆಳಗಾವಿ ವಿಭಾಗೀಯ, ಮೈಸೂರು ವಿಭಾಗೀಯ ಹಾಗೂ ಬೆಂಗಳೂರು ರಾಜ್ಯ ಸಮಾವೇಶಗಳನ್ನು ಶೀಘ್ರದಲ್ಲೇ ಆಯೋಜಿಸಲು ತೀರ್ಮಾನಿಸಲಾಯಿತು.

ರಾಜ್ಯದಲ್ಲಿ ಹಲವು ವರ್ಷಗಳಿಂದ ಖಾಲಿ ಉಳಿದಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು ಹಾಗೂ ಎಲ್ಲಾ ಇಲಾಖೆಗಳಲ್ಲಿ ರೋಸ್ಟರ್ ಬಿಂದುಗಳನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು ಎಂದು ಸಭೆ ಸರ್ವಾನುಮತದಿಂದ ನಿರ್ಣಯ ಕೈಗೊಂಡಿತು.

ಸಭೆಯಲ್ಲಿ ಸಂಘದ ರಾಜ್ಯಾಧ್ಯಕ್ಷ ಮಹೇಶ್ ಸಿ. ಹುಬಳ್ಳಿ, ರಾಜ್ಯ ಕಾರ್ಯಾಧ್ಯಕ್ಷ ಜೈ ಭೀಮ್, ರಾಜ್ಯ ಕಾರ್ಯಾಧ್ಯಕ್ಷ ಅನಿಲ್ ಕುಮಾರ್, ನ್ಯಾಯಾಂಗ ಇಲಾಖೆ ಪ್ರಧಾನ ಕಾರ್ಯದರ್ಶಿ ಶಶಿಕಲಾ, ರಾಜ್ಯ ಪ್ರಧಾನ ಕಾರ್ಯದರ್ಶಿ ಸುಧಾಕರ್ ಎಸ್. ಜಡಗಿ, ಬೆಂಗಳೂರು ನಗರ ಜಿಲ್ಲಾಧ್ಯಕ್ಷ ಶ್ರೀಧರ್ ಕೊಟ್ರೆ, ಜಿಲ್ಲಾ ಗೌರವಾಧ್ಯಕ್ಷ ನಾಗರಾಜ್, ರಾಜ್ಯ ಉಪಾಧ್ಯಕ್ಷ ಮುನಿಕೃಷ್ಣಪ್ಪ, ನ್ಯಾಯಾಂಗ ಇಲಾಖೆ ರಾಜ್ಯ ಪದಾಧಿಕಾರಿಗಳಾದ ಸಂಗಮ ಫರ್ತಾಬಾದ್, ಸುನಿತಾ ಕೊಂಬಿನ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗೀತಾ ಮೇಲಿನಕೇರಿ, ಅಶೋಕ್ ಕಲಾದಗಿ, ರವಿ ಹಾದಿಮನಿ, ಶಿಕ್ಷಣಪ್ಪ ಮಂಟಾಳೆ, ಬೆಳಗಾವಿ ಜಿಲ್ಲಾಧ್ಯಕ್ಷ ಮಹದೇವ ಐಹೊಳೆ, ರಾಜ್ಯ ಜಂಟಿ ಕಾರ್ಯದರ್ಶಿಗಳಾದ ಗೋವಿಂದ ಸಣ್ಣಕ್ಕಿ ಹಾಗೂ ಅಂಬಿಕಾ ಗಾಯಕ್ವಾಡ್ ಸೇರಿದಂತೆ ಅನೇಕ ಪದಾಧಿಕಾರಿಗಳು ಭಾಗವಹಿಸಿದ್ದರು.

ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಕರ್ನಾಟಕ ರಾಜ್ಯ ನ್ಯಾಯಾಂಗ ಇಲಾಖೆ ನೌಕರರ ಸಂಘದ ಕಾರ್ಯಕಾರಿ ಸಮಿತಿ ಸದಸ್ಯೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಉಪಾಧ್ಯಕ್ಷೆ ಡಾ. ಮಲ್ಲಿಕಾ ಎಂ. ದಾವಣಗೆರೆ, ಕವಿ-ಕಲಾವಿದ ಹಾಗೂ ಸಿನಿಮಾ ನಿರ್ದೇಶಕ ಹರ್ಷ ಹಜರತ್ ಅಲಿ, ಸೌರಭ ಸಾಂಸ್ಕೃತಿಕ ವೇದಿಕೆಯ ರಹಿಮಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಹಳಗನ್ನಡ ಕಾವ್ಯ ಉಳಿವಿಗೆ ಗಮಕ ವಾಚನ-ವ್ಯಾಖ್ಯಾನ ಕಾರ್ಯಕ್ರಮದಲ್ಲಿ ವಿವೇಕಾನಂದಗೌಡ ಪಾಟೀಲ**

# ಗಮಕ ಕಲೆಯೇ ಕುಮಾರವ್ಯಾಸ ಭಾರತದ ಜೀವಾಳ

■ವಿಜಯಸಾಕ್ಷಿ ಸುದ್ದಿ, ಗದಗ

ಕುಮಾರವ್ಯಾಸ ಭಾರತದಂತಹ ಅಮರ ಕಾವ್ಯಗಳ ಪ್ರಸಾರ ಮತ್ತು ಉಳಿವಿಗೆ ಗಮಕ ಕಲೆ ಅತ್ಯಗತ್ಯವಾಗಿದ್ದು, ಈ ಕಲೆಯನ್ನು ಉಳಿಸಿ ಬೆಳೆಸುವ ಕಾರ್ಯ ಸಮಾಜದಿಂದಲೇ ನಡೆಯಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹೇಳಿದರು.




ನಗರದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಕರ್ನಾಟಕ ಗಮಕ ಕಲಾ ಪರಿಷತ್ತು ಬೆಂಗಳೂರು ಜಿಲ್ಲಾ ಘಟಕ ಗದಗ, ಕುಮಾರವ್ಯಾಸ ಪ್ರತಿಷ್ಠಾನ ಗದಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಕುಮಾರವ್ಯಾಸ ಭಾರತದ ಗಮಕ ವಾಚನ ಮತ್ತು ವ್ಯಾಖ್ಯಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

"ಕುಮಾರವ್ಯಾಸನು ಹಾಡಿದನೆಂದರೆ ಕಲಿಯುಗ ದ್ವಾಪರವಾಗುವುದು" ಎಂಬ ಕುವೆಂಪು ಅವರ ಮಾತುಗಳು ಗದುಗಿನ ಭಾರತ ಕಾವ್ಯದ ಹಿರಿಮೆಯನ್ನು ಸಾರುತ್ತವೆ. ರೂಪಕಗಳ ಮೂಲಕ ಮಹಾಭಾರತದ ಅನೇಕ ಪ್ರಸಂಗಗಳನ್ನು ಕುಮಾರವ್ಯಾಸ ಅದ್ಭುತವಾಗಿ ಕಟ್ಟಿಕೊಟ್ಟಿದ್ದಾನೆ. ಅಂತಹ ಕಾವ್ಯವನ್ನು ಗಮಕಿಗಳು ಹಾಡಿ-ವ್ಯಾಖ್ಯಾನಿಸುವ ಮೂಲಕ ಸಹೃದಯರಲ್ಲಿ ಅನಿರ್ವಚನೀಯ ಆನಂದ ಮೂಡಿಸುತ್ತಿದ್ದಾರೆ ಎಂದು ಹೇಳಿದರು.

ಕುಮಾರವ್ಯಾಸ ನೆಲವಾದ ಗದಗದಲ್ಲಿ ಹೆಚ್ಚು ಗಮಕಿಗಳನ್ನು ರೂಪಿಸುವ ನಿಟ್ಟಿನಲ್ಲಿ ಸಂಗೀತ ಪಾಠಶಾಲೆಗಳು ಹಾಗೂ ಕುಮಾರವ್ಯಾಸ ಪ್ರತಿಷ್ಠಾನ ಪ್ರಮುಖ ಪಾತ್ರವಹಿಸಬೇಕು ಎಂದು ಕರೆ ನೀಡಿದರು.

> "ಗಮಕ ಕಲೆ ಉಳಿದರೆ ಮಾತ್ರ ಕುಮಾರವ್ಯಾಸ ಭಾರತದಂತಹ ಮಹಾಕಾವ್ಯಗಳ ಸೊಗಡು ಮುಂದಿನ ಪೀಳಿಗೆಗೂ ತಲುಪುತ್ತದೆ."
> – ವಿವೇಕಾನಂದಗೌಡ ಪಾಟೀಲ, ಕಸಾಪ ಜಿಲ್ಲಾ ಅಧ್ಯಕ್ಷ

ಕರ್ನಾಟಕ ಗಮಕ ಕಲಾ ಪರಿಷತ್ತಿನ ಅಧ್ಯಕ್ಷ ಡಾ. ದತ್ತಪ್ರಸನ್ನ ಪಾಟೀಲ ಮಾತನಾಡಿ, ಕನ್ನಡದ ಶ್ರೇಷ್ಠ ಕವಿ ಕುಮಾರವ್ಯಾಸರನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಉದ್ದೇಶದಿಂದ ವಿಶೇಷ ಯೋಜನೆ ರೂಪಿಸಲಾಗಿದೆ. ಹಳಗನ್ನಡ ಕಾವ್ಯದ ಬಗ್ಗೆ ಆಸಕ್ತಿ ಮೂಡಿಸಲು ಈ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕುಮಾರವ್ಯಾಸ ಭಾರತದ ಉದ್ಯೋಗಪರ್ವದಲ್ಲಿನ "ವಿಶ್ವರೂಪ ದರ್ಶನ" ಪ್ರಸಂಗವನ್ನು ಸಂಧ್ಯಾ ರಮೇಶ್ ಹಾಗೂ ಮೀನಾಕ್ಷಿ ಶ್ರೀಪಾದ (ಬೆಂಗಳೂರು) ಗಮಕ ವಾಚನ-ವ್ಯಾಖ್ಯಾನದ ಮೂಲಕ ಮನಮೋಹಕವಾಗಿ ಪ್ರಯೋಗಿಸಿದರು.

ಗುರುಮೂರ್ತಿ ದೇಶಪಾಂಡೆ, ಕುಮಾ[redacted]ವ್ಯಾಸ ಪ್ರತಿಷ್ಠಾನದ ಅಧ್ಯಕ್ಷರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ರಾಹುಲ ಗಿಡ್ನಂದಿ ನಿರೂಪಿಸಿದರು. ಡಿ.ಎಸ್. ಬಾಪುರಿ ಸ್ವಾಗತಿಸಿದರು. ಸುಮನ ಪಾಟೀಲ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಅಂದಾನಪ್ಪ ವಿಭೂತಿ, ವಿ.ಎಸ್. ದಲಾಲಿ, ಎಸ್.ಪಿ. ಹೊಂಬಳ, ರವೀಂದ್ರ ಜೋಶಿ, ಈಶ್ವರಪ್ಪ ಕುಬಸದ, ರಾಜೇಂದ್ರ ಕುಲಕರ್ಣಿ, ಜೆ.ಎ. ಪಾಟೀಲ, ಯಲ್ಲಪ್ಪ ಹಂದ್ರಾಳ, ಬೂದೇಶ ಮಜ್ಜಿಗುಡ್ಡ, ಮಲ್ಲಿಕಾರ್ಜುನ ಬಾರಕೇರ, ರತ್ನಕ್ಕ ಪಾಟೀಲ, ಶಾಂತಾಬಾಯಿ ಕುಲಕರ್ಣಿ, ಎನ್.ವಿ. ಪುರಾಣಿಕ, ಪ್ರಶಾಂತ ಪಾಟೀಲ, ಷಡಕ್ಷರಿ ಮೆಣಸಿನಕಾಯಿ, ಸಿ.ಎಂ. ಮಾರನಬಸರಿ, ದಯಾನಂದ ಮುಂಡರಗಿ, ದತ್ತಣ್ಣ ಜೋಶಿ, ಎಂ.ಎಫ್. ಡೋಣಿ, ಗುರುಪಾದ ಕಟ್ಟಿಮನಿ, ಅರವಿಂದ ಹುಯಿಲಗೋಳಕರ, ಚೆನ್ನಾರೆಡ್ಡಿ ಗೂಳರಡ್ಡಿ, ಗಜಾನನ ವೆರ್ಣೇಕರ, ಎಸ್.ಕೆ. ತೆಂಬದಮನಿ, ಎಸ್.ಎಸ್. ಹುನಗುಂದ, ಅಜಯ ಬಳಗಾನೂರ, ಶಶಿಕಾಂತ ಕೊರ್ಲಹಳ್ಳಿ, ಹೇಮಂತ ಕುಲಕರ್ಣಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಬಿರುಗಾಳಿ ಅಬ್ಬರಕ್ಕೆ ಮರ ಉರುಳಿ ಬಸ್ ಜಖಂ!



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಂಗಳವಾರ ಸಂಜೆ ನರೇಗಲ್ಲ ಹೋಬಳಿಯಲ್ಲಿ ಬೀಸಿದ ಬಿರುಗಾಳಿ ಹಾಗೂ ರಭಸದ ಮಳೆಗೆ ಮರವೊಂದು ಉರುಳಿ ಶಾಲಾ ವಾಹನ ಜಖಂಗೊಂಡ ಘಟನೆ ನಡೆದಿದೆ.

ಪಟ್ಟಣದ ಶ್ರೀ ಅನ್ನದಾನೇಶ್ವರ ಮಠದ ಆವರಣದಲ್ಲಿದ್ದ ತೇಗಿನ ಮರದ ದೊಡ್ಡ ಕೊಂಬೆ ಮುರಿದು ವಿದ್ಯುತ್ ತಂತಿಯ ಮೇಲೆ ಬಿದ್ದ ಪರಿಣಾಮ, ವಿದ್ಯುತ್ ಕಂಬಗಳು ಮುರಿದು ಮುಂದೆ ನಿಂತಿದ್ದ ಶಾಲಾ ವಾಹನದ ಮೇಲೆ ಬಿದ್ದವು. ಪರಿಣಾಮ ಬಸ್‌ಗೆ ಹಾನಿಯಾಗಿದೆ.

ಸಂಜೆ 5 ಗಂಟೆ ಸುಮಾರಿಗೆ ಆರಂಭವಾದ ಮಳೆ ಗುಡುಗು, ಮಿಂಚು ಹಾಗೂ ಸಿಡಿಲಿನೊಂದಿಗೆ ಆರ್ಭಟಿಸಿತು. ಸುಮಾರು ಒಂದೂವರೆ ಗಂಟೆಗಳ ಕಾಲ ಸುರಿದ ಧಾರಾಕಾರ ಮಳೆಯಿಂದ ನರೇಗಲ್ಲ ಪಟ್ಟಣದಲ್ಲಿ ಕೆಲಕಾಲ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಬಿರುಗಾಳಿಯ ರಭಸಕ್ಕೆ ಕೆಲ ಮನೆಗಳ ತಗಡುಗಳು ಸಪ್ಪಳ ಮಾಡಿದ್ದು, ಜನರು ಆತಂಕಗೊಂಡರು.

ಈಗಾಗಲೇ ಹೆಸರು ಬಿತ್ತಿದ ರೈತರಿಗೆ ಮಳೆ ಆಸರೆಯಾಗಿದ್ದು, ಮುಂದಿನ ಬಿತ್ತನೆ ಕಾರ್ಯಕ್ಕೂ ಹೊಲಗದ್ದೆಗಳಲ್ಲಿ ತೇವಾಂಶ ಹೆಚ್ಚಾಗಿದೆ.

ಬುಧವಾರ ಬೆಳಗ್ಗೆಯೂ ಮೋಡ ಕವಿದ ವಾತಾವರಣ ಮುಂದುವರಿದಿದ್ದು, ಕಾಲೇಜು ಸಮಯದಲ್ಲಿ ಸುರಿದ ಮಳೆಯಿಂದ ವಿದ್ಯಾರ್ಥಿಗಳು ಪರದಾಡಬೇಕಾಯಿತು.

ಕಳೆದ ಮಾರ್ಚ್ ತಿಂಗಳಿಂದ ತೀವ್ರ ಬಿಸಿಲಿಗೆ ಬೇಸತ್ತಿದ್ದ ಜನರಿಗೆ ಈ ಮಳೆ ತಂಪಿನ ಅನುಭವ ನೀಡಿದ್ದು, "ನರೇಗಲ್ಲ ಈಗ ಥಂಡಾ ಕೂಲ್" ಎಂದು ಸಾರ್ವಜನಿಕರು ಹರ್ಷ ವ್ಯಕ್ತಪಡಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka